

# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

SIHI KAHI

KANNADA DAILY MORNING
BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor: MARUTIBASAVANTAPPAHOSAMANI

Cell : +91 9741319119

RNI REG No. : KARKAN/2016/75068

Volume : 06 | Issue : 274 | Wednesday 10-07-2024 | E-mail : maruti.b.hosamani76@gmail.com | Page: 4 | Price : Rs. 1/-


## ರಾಯಚೂರಿನಲ್ಲಿಯೇ ಭಾರತೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (AIMS) ಮಂಜೂರು ಮಾಡಲು: ಕರವೇ ಮನವಿ

**ಮಸ್ಕಿ :** ಪಟ್ಟಣದ ಬಸವೇಶ್ವರ ನಗರದ ತಹಶೀಲ್ದಾರರ ಕಚೇರಿಯಲ್ಲಿ ಕಲ್ಯಾಣ ಕರ್ನಾಟಕದ ರಾಯಚೂರಿನಲ್ಲಿಯೇ ಭಾರತೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಂಋಋಒಖ) ಮಂಜೂರು ಮಾಡಲು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕ ಘಟಕ ಹೆಚ್. ಶಿವರಾಮೇಗೌಡ ಬಣದ ವತಿಯಿಂದ ತಹಶೀಲ್ದಾರರ ಮೂಲಕ ಪ್ರಧಾನ ಮಂತ್ರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು.



ಪ್ರಧಾನಮಂತ್ರಿ ನರೇಂದ್ರ ಮೋದಿ ರವರು ಘೋಷಿಸಿದಂತೆ ಈ ದೇಶದಲ್ಲಿ 112 ಮಹತ್ವಾಕಾಂಕ್ಷಿ ಜಿಲ್ಲೆಗಳಲ್ಲಿ, ಕರ್ನಾಟಕ ರಾಜ್ಯದ ಅದು ಕಲ್ಯಾಣ ಕರ್ನಾಟಕದ, ರಾಯಚೂರು ಮತ್ತು ಯಾದಗಿರಿ ಜಿಲ್ಲೆ, ಇವೆರಡು ಜಿಲ್ಲೆಗಳು ಕರ್ನಾಟಕ ರಾಜ್ಯದಲ್ಲಿ ಮಹತ್ವಾಕಾಂಕ್ಷಿ ಜಿಲ್ಲೆಯ ಅಡಿಯಲ್ಲಿ ಬರುತ್ತವೆ. ಕಳೆದ 76ವರ್ಷಗಳಿಂದಅಂದರೆಸ್ವಾತಂತ್ರನಂತರಇಂದಿಗೂ ರಾಯಚೂರು ಜಿಲ್ಲೆಗೆ ಯಾವುದೇ ಮಹತ್ವಕಾಂಕ್ಷಿ ಯೋಜನೆ ಜಾರಿಯಾಗಿಲ್ಲ. ರಾಯಚೂರು ಜಿಲ್ಲೆಯು ಬಹಳ ಹಿಂದುಳಿದ ಜಿಲ್ಲೆಯಾಗಿದ್ದು, ಕರ್ನಾಟಕ ರಾಜ್ಯ ಸರ್ಕಾರವು ಪ್ರಾದೇಶಿಕ ಅಸಮತೋಲನತೆಯನ್ನು ಹೋಗಲಾಡಿಸಲು. ನಂಜುಂಡಪ್ಪ ಆಯೋಗವನ್ನು ರಚಿಸಲಾಯಿತು. ನಂಜುಂಡಪ್ಪನ ವರದಿಯಂತೆ ಬೇರೆ ಬೇರೆ ಜಿಲ್ಲೆಗಳಲ್ಲಿ ಬೇಡಿಕೆಯಂತೆ, ರಾಯಚೂರು ಜಿಲ್ಲೆಗೆ ಐಐಟಿಯನ್ನು ಕೊಡಬೇಕೆಂದು ತಿಳಿಸಲಾಗಿತ್ತು. ಆದರೆ ರಾಯಚೂರಿನಲ್ಲಿ ಐ.ಐ.ಟಿ ಹೋರಾಟ ಸಮಿತಿಯನ್ನು ಒಳಗೊಂಡು ಹಲವು ಸಂಘ ಸಂಸ್ಥೆಗಳು ಕೂಡ ಐ.ಐ.ಟಿ ಯನ್ನು ಪಡೆಯಲು ಬಹಳ ಗಂಭೀರವಾದ ಹೋರಾಟ ಮಾಡಿದರು.

ಆದರೆ ಐ.ಐ.ಟಿ ಮೋಸದಿಂದ. ಧಾರವಾಡದ ಪ್ರಭಲ ರಾಜಕೀಯ ಪ್ರಭಾವದಿಂದ, ಐ.ಐ.ಟಿ ಯನ್ನು ಧಾರವಾಡಕ್ಕೆ ಕಸಿದು ಕೊಳ್ಳಲಾಯಿತು. ಆ ಸಮಯದಲ್ಲಿ ನಮಗೆ ಸಮಾಧಾನಿಸಲು. ರಾಯಚೂರಿಗೆ ಭಾರತೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯನ್ನು (AIIMS) ಆಗಿನ ರಾಜ್ಯ ಸರ್ಕಾರವು, ಭರವಸೆಯನ್ನು ನೀಡಲಾಗಿತ್ತು. ಕರ್ನಾಟಕ ರಾಜ್ಯಕ್ಕೆ ಒಂದು ಭಾರತೀಯ ವೈದ್ಯಕೀಯ ವಿಜ್ಞಾನಿಗಳ ಸಂಸ್ಥೆ (AIIMS) ನೀಡಲಾಗುವು ದೆ-ಂದು ತಮ್ಮ ಸರಕಾರ ಘೋಷಣೆ ಮಾಡಿತು. ಆದರೆ ಮತ್ತೆ ಅದೇ ಧಾರವಾಡದ ಪ್ರಬಲ ರಾಜಕಾರಣಿಗಳ ಕುತಂತ್ರ. ಏಮ್ಸ್ ಧಾರವಾಡಕ್ಕೆ ತೆಗೆದು ಕೊಂಡು ಹೋಗಲು ಹುನ್ನಾರ ಮಾಡಲಾಗಿದೆ ಈ ವಿಷಯ ತಮ್ಮ ಗಮನಕ್ಕಿರಲಿ. ಅದಲ್ಲದೆ ಸುಮಾರು 26 ತಿಂಗಳಿಂದ (788 ದಿನಗಳಿಂದ) ತಿಂಗಳಿಂದ ಅಂ-ದರೆ ಎರಡು ವರ್ಷಗಳ ಮೇಲ್ಪಟ್ಟು ರಾಯಚೂರಿನಲ್ಲಿ, ರಾಯಚೂರು ಜಿಲ್ಲಾ ಎಮ್ಸ್ (AIIMS)ಹೋರಾಟ ಸಮಿತಿಯಿಂದ ಹಾಗೂ ಹಲವೂ ಸಂಘ ಸಂಸ್ಥೆಗಳ, ವ್ಯಾಪಾರ ಸಂಸ್ಥೆಗಳು, ವಿವಿಧ ಸಂಘಗಳ ಬೆಂಬಲ ದಿಂದ ನಿರಂತರ ಅನಿರ್ಧಿಷ್ಟ ಧರಣಿ ಸತ್ಯಾಗ್ರಹ ಮುಂದುವರೆದಿದೆ. ನ್ಯಾಯುತವಾಗಿ ಮಹತ್ವದ ಒಂದು ಆರೋಗ್ಯ ಸಂಸ್ಥೆಯನ್ನು ಪಡೆಯಲು ಎರಡು ವರ್ಷಗಳ ಕಾಲ, 26 ತಿಂಗಳಿಂದ (788 ದಿನಗಳಿಂದ ಹೋರಾಟ ಮಾಡಬೇಕಾಗುತ್ತದೆಯೇ?? ಇದು ಆಲೋಚಿಸಬೇಕಾಗಿದೆ!!!? ರಾಯಚೂರಿಗೆ ಎಮ್ಸ್ ಪ್ರಧಾನಿಯವರು ಗಂಭೀರವಾಗಿ ಕೊಡಬೇಕೆಂದು ಇಲ್ಲಿಯ ರಾಜ್ಯ ಸರ್ಕಾರ ದಿಂದ ಮಂತ್ರಿಗಳು, ಶಾಸಕರುಗಳು ಮತ್ತು ಸಂಸದರು ಹಾಗೂ ಹೋರಾಟಗಾರರ ಒಳಗೊಂಡು, ಕರ್ನಾಟಕ ರಾಜ್ಯ ಸರ್ಕಾರವೂ ಒಂದು ನಿಯೋಗವನ್ನು ತೆಗೆದು-ಕೊಂಡು ತಮ್ಮ ಸರಕಾರದ ಹಿಂದಿನ ಆರೋಗ್ಯ ಕುಟುಂಬ ಕಲ್ಯಾಣ ಮಂತ್ರಿಗಳಾದ ಮನಸೂಕ ಮಾಂಡವಿಯಾ ರವರಿಗೂ ಭೇಟಿ ಮಾಡಲಾಗಿತ್ತು. ನಮ್ಮ ರಾಜ್ಯದ ಮುಖ್ಯಮಂತ್ರಿಗಳು ಸಿದ್ದರಾಮಯ್ಯ ಅವರು ಕೂಡ ಎರಡು ಪತ್ರಗಳನ್ನು ತಮ್ಮ ಆರೋಗ್ಯ ಸಚಿವರಿಗೆ ಬರೆದರು. ಕೇಂದ್ರ ಚುನಾವಣೆಯ ಮುಂಚೆ ಬಜೆಟ್ ಘೋಷಣೆಯ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು, ಒಂದು ಪತ್ರವನ್ನು ಹಿಂದಿನ ಮತ್ತು ಈಗಿನ ಹಣಕಾಸು ಸಚಿವ ಶ್ರೀಮತಿ ನಿರ್ಮಲಾ ಸೀತಾರಾಮನ್ ರವರಿಗೂ ಪತ್ರ ಬರೆದರೂ. ಕರ್ನಾಟಕ ರಾಜ್ಯ ಸರಕಾರದ ಇಷ್ಟು ಒತ್ತಡವಿದ್ದರೂ, ತಮ್ಮ ಮತ್ತು ತಮ್ಮ ಸರಕಾರದ ಕಡೆಯಿಂದ ನೀರೂತ್ತರ ಯಾಕೆ??

ಮಹತ್ವಾಕಾಂಕ್ಷಿ ಜಿಲ್ಲೆ ಘೋಷಣೆ ಮಾಡಿದ ನಂತರ ಹಿಂದುಳಿದ ಜಿಲ್ಲೆ ಎಂದು ಹಣೆಪಟ್ಟಿ ಕಳಚುವ ಗೋಸ್ಕರ ತಾವ್ಯಾಕೆ ರಾಯಚೂರು ಜಿಲ್ಲೆಗೆ ಭಾರತೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ನೀಡುತ್ತಿಲ್ಲ??. ಪ್ರಧಾನಮಂತ್ರಿ ಜಿ ಅವರೇ ಈ ಬಾರಿ ಕಲ್ಯಾಣ ಕರ್ನಾಟಕದ 5 ಸಂಸದರು ಕಾಂಗ್ರೆಸ್ ನಿಂದ ಆಯ್ಕೆ ಆಗಿದ್ದಾರೆ. ಇದಕ್ಕೆ ಕಾರಣ ಏಮ್ಸ್ (AIIMS) ಹೋರಾಟ ದೀರ್ಘದ ಹೋರಾಟ!॥. ಇತಿಹಾಸ ನಿರ್ಮಾಣ ಮಾಡಿದ ಹೋರಾಟ. ದಯವಿಟ್ಟು ಜನರ ಬೇಡಿಕೆಗಳಿಗೆ ತಾವು ಸ್ಪಂದಿಸಲಿಲ್ಲ ಅಂದ್ರ ಏಕೆ.?? ತಾವು ವಿಶೇಷವಾಗಿ ಗಮನ ಹರಿಸಿ, ನಮ್ಮ ರಾಯಚೂರಿಗೆ ತಕ್ಷಣ ಭಾರತೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಏಮ್ಸ್ (AIIMS) ಘೋಷಣೆ ಮಾಡಿ ಇಲ್ಲದಿದ್ದರೆ. ಕಲ್ಯಾಣ ಕರ್ನಾಟಕದಲೆಲ್ಲ ಭಯಂಕರ ಚಳುವಳಿಯಾಗುತ್ತದೆ. ಅದಕ್ಕೆ ಅವಕಾಶ ಮಾಡಿ ಕೊಡಬೇಡಿ ಅಪಾರ ಭರವಸೆಯೊಂದಿಗೆ ಈ ಮನವಿ ಪತ್ರವನ್ನು ಕರ್ನಾಟಕ ರಕ್ಷಣಾ ವೇದಿಕೆ ಎಚ್.ಶಿವರಾಮಗೌಡರ ಬಣದ ವತಿಯಿಂದ ತಹಶೀಲ್ದಾರ್ ಸುಧಾ ಅರಮನೆ ಇವರ ಮೂಲಕ ಪ್ರಧಾನ ಮಂತ್ರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಆರ್.ಕೆ ನಾಯಕ ತಾಲೂಕ ಅಧ್ಯಕ್ಷರು ಮಸ್ಕಿ,ಸಿದ್ದಪ್ಪ ಮೇಟಿ ಅಧ್ಯಕ್ಷರು ಮೆದಿಕಿನಾಳ ಹೋ.ಘಟಕ, ಅಮರೇಶ ನಾಯಕ ಕಾಸ್ಲಿ, ಮೌನೇಶ್ ಹಸಮಕಲ್,ದೇವಪ್ಪ ಮಾಸ್ತರ, ಹನುಮಂತ ಉಪ್ಪಾರ,ಆಂಜನೇಯ ಮೋಚಿ,ನಾಗರಾಜ ನಾಯಕ ಮೆದಿಕಿನಾಳ,ಸಂತೋಷ್ ಕಬ್ಬೆರ್,ಮೌನೇಶ್ ನಾಯಕ ನಗನೂರು,ಯಂಕೋಬ ನಾಯಕ ಕಾಸ್ಲಿ,ಮೌನೇಶ್ ಹಳ್ಳಿ,ಚನ್ನಬಸವ ಹೂಗಾರ್, ಅಶರಪ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಪ್ರತಾಪ್ ವಾಯ್ ಕಿಳ್ಳಿ ಇಲಕಲ್ಲ.**

## ವೀರಶೈವ ಮಹಾ ಸಭಾ ಅಧ್ಯಕ್ಷರಾಗಿ ಜಿ. ಸುನಿಲ್ ಪಾಟೀಲ್ ಆಯ್ಕೆ



**ಕೂಡ್ಲಿಗಿ :** ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಕೂಡ್ಲಿಗಿ ಪಟ್ಟಣದ ಜಿ. ಸುನಿಲ್ ಪಾಟೀಲ್ ಅವರು ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಘಟಕಕ್ಕೆ ಅಧ್ಯಕ್ಷರಾಗಿ ಅವಿರೋಧ ಆಯ್ಕೆಯಾಗಿ ಇವರೊಂದಿಗೆ 13 ಜನ ಪುರುಷರು ಹಾಗೂ ಏಳು ಮಂದಿ ಮಹಿಳೆಯರು ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣೆ ಅಧಿಕಾರಿ ವಿ. ಎಸ್. ಸಿದ್ದರಾಧ್ಯ ತಿಳಿಸಿದ್ದಾರೆ. ಅಧ್ಯಕ್ಷ ಸ್ಥಾನ ಸೇರಿದಂತೆ ಎಲ್ಲಾ ಕಾರ್ಯಕಾರಿ ಸದಸ್ಯರ ಸ್ಥಾನಗಳಿಗೆ ಒಬ್ಬರೇ ನಾಮಪತ್ರ ಸಲ್ಲಿಸಿದು ಎಲ್ಲರೂ ಅವಿರೋಧವಾಗಿ ಆಯ್ಕೆಯಾಗಿದ್ದಾ-ರೆ ಎಂದು ತಿಳಿಸಿದ್ದಾರೆ. ಕಾರ್ಯಕಾರಿ ಸಮಿತಿಯ ಮಹಿಳಾ ಸದಸ್ಯ ರಾಗಿ ಕೆ. ಎಚ್. ಎಂ. ಶೈಲಜಾ, ಎ ಸುಮಂಗಲ, ಕೆಎಚ್ಎಂ ಅನ್ನಪೂರ್ಣ,ಮಂಜುಳಾ, ಟಿ ಬಿ ಅಂಬಿಕಾ, ಎಸ್ ವೀರಮ್ಮ, ಪ್ರತಿಭಾ, ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಎಂ ಮಂಜುನಾಥ, ಶೆಟ್ರು ಬಸವರಾಜ್, ಜೆ ಬಸವರಾಜ್, ಎಂ ಮರಳು ಸಿದ್ದಪ್ಪ,ಬಣಕಾರ ಮೂಗಪ್ಪ,ಜಿ ಸೋಮಶೇಖರ, ಪಿ ಜಯರಾಜ್, ಕೆಎಸ್ ವೀರೇಶ್, ಮಹೇಂದ್ರ ಕುಮಾರ್,ಜಿಎಸ್ ಗಿರೀಶ್, ಕೆಎಚ್ ವಿಶ್ವನಾಥ,ಟಿ ಹೆಚ್ ಎಂ ಶೇಖರಯ್ಯ, ಎನ್ ಜಿ ಚನ್ನಬಸವನಗೌಡ, ಆಯ್ಕೆಯಾಗಿದ್ದಾರೆ, ಕೂಡ್ಲಿಗಿ ತಾಲೂಕು ಘಟಕದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಜಿ.ಸುನಿಲ್ ಪಾಟೀಲ್ ರವರಿಗೆ ಹಾಗೂ ಪದಾಧಿಕಾರಿಗಳಿಗೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ಸಂಜೆ ಚುನಾವಣೆ ಅಧಿಕಾರಿ ಎಸ್. ವಿ.ಸಿದ್ದರಾಧ್ಯ ಪ್ರಮಾಣ ಪತ್ರ ವಿತರಿಸಿದರು. ನಿಕಟ ಪೂರ್ವ ಅಧ್ಯಕ್ಷರಾಗಿ ಟಿ.ಜಿ. ನಾಗರಾಜ್ ಗೌಡ ಜಿಲ್ಲಾ ನಿರ್ದೇಶಕರಾದ ಎಂ ಗುರುಸಿದ್ದನಗೌಡ್ರು, ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾಗಿ ಕೆ ನಾಗರಾಜ್ ನೌಕರರ ಸಂಘದ ತಾಲೂಕು ಅಧ್ಯಕ್ಷರು ಪಿ ಶಿವರಾಜ್, ಕೋಗಳಿ ಮಂಜುನಾಥ, ಸೇರಿದಂತೆ ಇತರರು ಇದ್ದರು.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಕೆ.ಎಸ್.ವೀರೇಶ್ ಕೆ. ಹೊಸಹಳ್ಳಿ.**

## ಸರ್ಕಾರಿ ಪಾಲಿಟೆಕ್ನಿಕ್ ಬಾಲಕರ ವಸತಿ ನಿಲಯ ಕಟ್ಟಡ ಉದ್ಘಾಟನೆ: ಯಶವಂತರಾಯಗೌಡ ಪಾಟೀಲ

**ಇಂಡಿ :** ಪ್ರಾಮಾಣಿಕತೆ ಜೀವನದ ಭಾಗವಾಗಿರಲಿ, ನಿಮ್ಮ ಪುಸ್ತಕಗಳ ಜೊತೆಯಲ್ಲಿ ಸ್ವಾಮಿ ವಿವೇಕಾನಂದ ಜೀವನ ಚರಿತ್ರೆಯ ಪುಸ್ತಕ ಓದಿ, ನಿಮ್ಮ ಬದುಕು ಬದಲಾವಣೆ ಯಾಗುತ್ತದೆ. ಅವರ ಮಾನವೀಯ ಮೌಲ್ಯಗಳನ್ನು ಹಾಗೂ ಸಂಸ್ಕಾರವನ್ನು ನಿಮ್ಮ ಜೀವನದಲ್ಲಿ ಅಳವಡಿಸಿ ಕೊಳ್ಳಿ ಎಂದು ವಿಧ್ಯಾರ್ಥಿಗಳಿಗೆ ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು.

ತಾಲ್ಲೂಕಿನ ಝಳಕಿ ಗ್ರಾಮದಲ್ಲಿ ಸರಕಾರಿ ಪಾಲಿಟೆಕ್ನಿಕಲ್ ಬಾಲಕರ ವಸತಿ ನಿಲಯದ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಗಡಿ ಭಾಗದಲ್ಲಿ ಶೈಕ್ಷಣಿಕ ಕ್ರಾಂತಿಗಾಗಿ ಶಿಕ್ಷಣ ಕಾಶಿಯಾಗಿ ಝಳಕಿ ಗ್ರಾಮವನ್ನು ರೂಪಿಸಲಾಗಿದೆ. ಕಳೆದ 10 ವರ್ಷಗಳಿಂದ ಈ ಮಹಾ ಗಡಿ ಭಾಗದಲ್ಲಿ ಪ್ರಾಥಮಿಕ ಶಿಕ್ಷಣ ದಿಂದ ಉನ್ನತ ಶಿಕ್ಷಣವರೆಗೆ ಶಿಕ್ಷಣ ಕೇಂದ್ರ ಸ್ಥಾಪಿಸಲಾಗಿದೆ. ಈ ಗಡಿ ಭಾಗದ ಮಕ್ಕಳು ಪ್ರಾಥಮಿಕ ಶಿಕ್ಷಣ ಹಿಡಿದು ಉನ್ನತ ಶಿಕ್ಷಣವರಿಗೆ ಕಲಿಯಲು ಸರಕಾರ ಅವಕಾಶ ಮಾಡಿ ಕೊಟ್ಟಿದೆ. ಇಲ್ಲಿ ಸರಕಾರಿ ವಸತಿ ನಿಲಯ ಮಾಡುವ ಮೂಲಕ ಇನ್ನೊಂದು ಹೊಸ ಹೆಜ್ಜೆ ಇಟ್ಟಂತಾಗಿದೆ. ಈ ಹಿಂದೆ ಝಳಕಿ ಅಂದರೆ ಆರ್.ಟಿ.ಓ ಚಕ್ ಪೋಸ್ಟ್ ಗೆ ಮಾತ್ರ ಹೆಸರು ಸೀಮಿತವಾಗಿತ್ತು. ಅದನ್ನು ಶೈಕ್ಷಣಿಕ ಕೇಂದ್ರಗಳ ಸ್ಥಾಪನೆ ಮಾಡುವ ಮೂಲಕ ಇಂಡಿ ಮತ ಕ್ಷೇತ್ರದಲ್ಲಿ ಏಕೈಕ ಶಿಕ್ಷಣ ಕಾಶಿ ಕೇಂದ್ರವಾಗಿ ಮಾಡಿದ್ದು ನನಗೆ ಸಂತಸ ತಂದಿದೆ.



ಈ ಝಳಕಿ ಗ್ರಾಮದಲ್ಲಿ ಸುಮಾರು 2 ಸಾವಿರಕ್ಕಿಂತಲೂ ಹೆಚ್ಚಿನ ಬಡ ಮಕ್ಕಳು ಇಲ್ಲಿ ಶಿಕ್ಷಣ ಪಡೆಯುತ್ತಿದ್ದಾರೆ. ಇಲ್ಲಿ ಪ್ರಾಥಮಿಕ ಶಿಕ್ಷಣ ಹಿಡಿದು ಉನ್ನತ ಶಿಕ್ಷಣ ವರೆಗೆ ಸರಕಾರಿ ಶಾಲೆಗಳು ಇವೆ ಅದರ ಜೊತೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕ ವಸತಿ ನಿಲಯ ಮಾಡಿದ್ದೇವೆ. ಈ ಭಾಗದ ಶೈಕ್ಷಣಿಕ ಅಭಿವೃದ್ಧಿಗೆ ಈ ಸರಕಾರಿ ಶಾಲಾ-ಕಾಲೇಜು ಸಾಕ್ಷಿ ಎಂದು ಹೇಳಿದರು.

ಈಭಾಗದಲ್ಲಿಇನ್ನೂಶಿಕ್ಷಣಕಲಿಯುವಸಂಖ್ಯೆಹೆಚ್ಚಾಗಬೇಕು. ಅದಕ್ಕೆ ಪ್ರತಿಯೊಬ್ಬರು ಶಿಕ್ಷಕರು ತಮ್ಮ ಜವ್ದಾರಿಯನ್ನು ಅರಿತು ಕೆಲಸ ಮಾಡಬೇಕು. ಶಿಕ್ಷಣ ಕಾಶಿಗೆ ಕೆಟ್ಟ ಹೆಸರು ಬರದ ಹಾಗೆ ನೋಡಿ ಕೊಳ್ಳಬೇಕು. ಸಮಯದ ಪಾಲನೆ ಹಾಗೂ ಮಾನವೀಯ ಮೌಲ್ಯಗಳನ್ನು ಕಲಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಇಂಡಿ ಉಪ ವಿಭಾಗ ಅಧಿಕಾರಿ ಅಭೀದ್ ಗದ್ಯಾಳ, ಸಿದ್ದಣ್ಣಗೌಡ ಬಿರಾದಾರ, ಶಿವಪುತ್ರ ಜೆವಳಿ, ನಾರಾಯನ ಜಾಗೀರದಾರ, ಸಣ್ಣಪ್ಪ ತಳವಾರ, ರುಕ್ಮದೀನ ತದ್ದೇವಾಡಿ, ಅಣ್ಣಪ್ಪ ತಳವಾರ, ರಾಘವೇಂದ್ರ ಕಾಪಸೆ, ಶೆಬ್ಬೀರ ಮುಲ್ಲಾ, ಪ್ರಥಮ ದರ್ಜೆ ಕಾಲೇಜ ಪ್ರಾಚಾರ್ಯ ವಲ್ಲಭ ಕಭಾಡೆ, ಪದವಿ ಪೂರ್ವ ಕಾಲೇಜ್ ಪ್ರಾಚಾರ್ಯರು ಸಿ ಕೆ ಯಳಸಂಗಿ, ಪ್ರೌಢ ಶಾಲೆ ಮುಖ್ಯ ಗುರುಗಳು ಎಸ್ ಬಿ ನಾಗಣೆ, ಅಶೋಕ ಕಾಪಸೆ, ಈರಣ್ಣ ವಾಲಿ, ಸತೀಶ ಹತ್ತಿ, ಮೋಮಿನ್ ಜಾವೀದ್, ನೀಲಕಂಠ ರೂಗಿ, ರವಿ ಅರಳಿ, ಶಂಕರಗೌಡ ಬಿರಾದಾರ, ಹಣಮಂತ ಖಡೆಖಡೆ, ಹಣಮಂತ ಕೋಳಿ, ಭೀಮರಾಯ ಪೂಜಾರಿ ಇತರರು ಇದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಶಿವಪ್ಪ..ಬಿ.ಹರಿಜನ. ಇಂಡಿ ವಿಜಯಪುರ.**

## ವಿಶ್ವವಿದ್ಯಾಲಯ ಮಾಡುವ ಕಾರ್ಯವನ್ನು ಡಾ. ಹಳಕಟ್ಟಿ ಮಾಡಿದ್ದಾರೆ: ಪೂಜಾರಿ




**ಬನಹಟ್ಟಿ :** ಕನ್ನಡ ಸಾರಸ್ವತ ಲೋಕದಲ್ಲಿ ವಚನ ಚಳುವಳಿಗೆ ಮಹತ್ತರ ಸ್ಥಾನವಿದೆ. ಕಲ್ಯಾಣ ಕ್ರಾಂತಿಯ ನಂತರ ಎಲ್ಲ ಶರಣರು ಚದುರಿ ಹೋದರು. ಉಳವಿ ಕ್ಷೇತ್ರ ವಚನಗಳ ರಕ್ಷಣಾ ಕೇಂದ್ರವಾಯಿತು. ಇಪ್ಪತ್ತನೆಯ ಶತಮಾನದಲ್ಲಿ ನಶಿಸಿ ಹೋಗಬಹುದಾಗಿದ್ದ ಈ ವಚನಗಳನ್ನು ಅಪಾರ ಕಷ್ಟಪಟ್ಟು ಸಂಗ್ರಹಿಸುವ ಮಹಾನ್ ಕಾರ್ಯ ಮಾಡಿದವರು ಹಳಕಟ್ಟಿಯವರು. ಒಂದು ವಿಶ್ವ ವಿದ್ಯಾಲಯದವರು ಮಾಡುವ ಕಾರ್ಯವನ್ನು ಡಾ. ಹಳಕಟ್ಟಿಯವರು ಅಪಾರ ಪರಿಶ್ರಮದಿಂದ ಮಾಡಿದ್ದಾರೆ ಎಂದು ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ ತಿಳಿಸಿದರು. ಮಂಗಳವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ನಡೆದ ವಚನ ಸಂರಕ್ಷಣಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಹಶೀಲ್ದಾರ ಗಿರೀಶ ಸ್ವಾದಿ ಮಾತನಾಡಿ, ಇಂದಿನ ದಿನಗಳಲ್ಲಿ ವಚನ ಸಾಹಿತ್ಯವನ್ನು ಉಳಿಸಿ ಬೆಳೆಸಬೇಕಾಗಿದೆ. ಈ ದಿಶೆಯಲ್ಲಿ ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಶರಣರ ವಚನಗಳನ್ನು ಕಲಿಸಬೇಕು. ಇದುವೇ ನಾವು ಡಾ. ಹಳಕಟ್ಟಿಯವರಿಗೆ ಸಲ್ಲಿಸುವ ಗೌರವ ಎಂದು ತಿಳಿಸಿದರು.

ಶ್ರೀಶೈಲ ಧಬಾಡಿ, ದಾನಪ್ಪ ಹುಲಜತ್ತಿ, ಶಿವಾನಂದ ಬಾಗಲಕೋಟಮಠ, ಶಿವಕುಮಾರ ಷಣ್ಮುಖಿ, ಪ್ರಕಾಶ ಮಠಪತಿ, ಎಸ್. ಎಲ್. ಕಾಗಿಯವರ, ಸದಾಶಿವ ಕುಂಬಾರ, ಮಹಾಲಿಂಗ ಗೋಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## "ಶಿಕ್ಷಣದ ದೇವಾಲಯ ನನ್ನ ಸರ್ಕಾರಿ ಶಾಲೆ"...

ಶಾಲೆಗೆ ಬಂದ ಮೊದಲ ದಿನವೇ ಕಂಡೆ ಭೂಲೋಕದ ಸ್ವರ್ಗ ಕಪ್ಪುಹಲಿಗೆಯಲ್ಲಿ ಕಂಡೆ ಭವಿಷ್ಯದ ಜ್ಞಾನದ ಸನ್ಮಾರ್ಗ ಮಾತನಾಡಲಿಲ್ಲ ದೇವರು ಬಾರಿಸಿದರು ಗುಡಿಯ ಗಂಟೆ ಗುರುವೇ ದೇವರಾದರು ಬಾರಿಸಿದಾಗ ಶಾಲೆಯ ಗಂಟೆ. ನನ್ನ ಶಾಲೆ ನನ್ನ ಜೀವನದ ಒಂದು ಅತ್ಯಂತ ಮುಖ್ಯ ಭಾಗ ಅದು ನನಗೆ ಶಿಕ್ಷಣದ ಮೂಲಭೂತ ಹಾಗೂ ನೈತಿಕ ಮೌಲ್ಯಗಳನ್ನು ಕೊಟ್ಟಿದೆ. ಅನುಭವವು ಸವಿಯಲ್ಲ ಆದರೆ ನೆನಪೇ ಸವಿಯು ಎಂಬ ಮಾತಿದೆ. ಗತಿಸಿ ಹೋದ ಆ ದಿನಗಳು ಆ ದಿನಗಳಲ್ಲಿನ ಅನುಭವ ಮತ್ತು ಆ ಅನುಭವದ ಹಿಂದಿನ ಸನ್ನಿವೇಶಗಳು ಮತ್ತು ಅದರ ಸುತ್ತಮುತ್ತ ಜರುಗುವ ವಿವಿಧ ಚಟುವಟಿಕೆಗಳು ಅವುಗಳ ಕುರಿತಂತೆ ನಾವು ಮಾಡುವ ಕಲ್ಪನೆಗಳು ಮತ್ತು ಗ್ರಹಿಕೆಗಳು ಇತರರಿಂದ ಕೇಳಿಸಿಕೊಳ್ಳುವ ಪ್ರಶಂಸನೀಯ ಮಾತುಗಳು ಅಥವಾ ಕೆಣಕುವ ಬಿಚ್ಚು ನುಡಿಗಳು ಇವೆಲ್ಲರ ಅನುಭವದಿಂದ ನಾವು ಕಲಿಯುವ ಅಥವಾ ಕಲಿಯದ ಪಾಠಗಳು ನಮ್ಮ ವ್ಯಕ್ತಿತ್ವದ ಬೆಳವಣಿಗೆಯಲ್ಲಿ ಗಾಢವಾದ ಮತ್ತು ಮಹತ್ತರವಾದ ಪರಿಣಾಮ ಬೀರುತ್ತವೆ ಕಹಿ ಅನುಭವವನ್ನು ಮರೆತು ಸಿಹಿ ಅನುಭವವನ್ನು ಮೆಲುಕು ಹಾಕುತ್ತಾ ಬಾಳುವುದೇ ಜೀವನದ ಸಾರ್ಥಕತೆ. ಶಾಲೆಯು ನಾವು ಕಲಿಯುವ ಮತ್ತು ಬೆಳೆಯುವ ಸ್ಥಳವಾಗಿದೆ ಶಾಲೆಯು ನಾವು ನಾವೇ ಆಗಿರುವ ಮತ್ತು ಜಗತ್ತಿನಲ್ಲಿ ನಮ್ಮ ಸ್ಥಾನವನ್ನು ಕಂಡುಕೊಳ್ಳುವ ಸ್ಥಳವಾಗಿದೆ. ನನ್ನ ಶಾಲೆಯ ಬಗ್ಗೆ ಯೋಚಿಸಿದಾಗಲೆಲ್ಲ ಅದು ಶಿಕ್ಷಣದ ದೇವಾಲಯ ಎಂದು ನಾನು ಭಾವಿಸುತ್ತೇನೆ.


ಶಾಲೆಯು ನನ್ನಲ್ಲಿ ಶಿಕ್ಷಣ ಮತ್ತು ಇತರ ಅಗತ್ಯ ಗುಣಗಳನ್ನು ನೀಡಿ ನನ್ನನ್ನು ಹೆಚ್ಚು ಆತ್ಮವಿಶ್ವಾಸಮತ್ತುಶಕ್ತಿಯುತವಾಗಿಸಿದೆ.ನನ್ನ ಶಿಕ್ಷಣಕ್ಕೆ ನನ್ನ ಶಾಲೆಯು ಪ್ರಾಥಮಿಕವಾಗಿ ಕಾರಣವಾಗಿದೆ. ಶೈಕ್ಷಣಿಕ ದೃಷ್ಟಿಕೋನದಿಂದ ಇದು ನನ್ನ ಜೀವನದಲ್ಲಿ ಬಹಳ ಮುಖ್ಯವಾಗಿದೆ. ಸವಾಲಿನ ಸಂದರ್ಭಗಳಲ್ಲಿ ಶಾಂತವಾಗಿರುವುದು ಮತ್ತು ಇತರರಿಗೆ ಸಹಾಯ ಮಾಡುವಂತೆ ಎಲ್ಲಾ ಅಗತ್ಯ ಜೀವನದ ಕೌಶಲ್ಯಗಳನ್ನು ನಾನು ಕಲಿತ ಶಾಲೆಯಿಂದ ತಿಳಿದುಕೊಂಡಿರುವ ಅಂಶಗಳು.

ಜೀವನದಲ್ಲಿ ನಮಗೆ ಕುಟುಂಬ ಎಷ್ಟು ಮುಖ್ಯವಾಗುತ್ತದೆಯೇಅದರಷ್ಟೇಶಾಲೆಯು ಮುಖ್ಯವಾಗುತ್ತದೆ ಏಕೆಂದರೆ ಕುಟುಂಬವು ನಮಗೆ ಪ್ರೀತಿ ಕಾಳಜಿ ಮತ್ತು ಪ್ರೀತಿಯನ್ನು ನೀಡುತ್ತದೆ ಮತ್ತು ನಮ್ಮೆಲ್ಲ ಅಗತ್ಯಗಳನ್ನು ಒದಗಿಸುತ್ತದೆ ಆದರೆ ಇವೆಲ್ಲವೂ ನಮ್ಮನ್ನು ಉತ್ತಮ ಮನುಷ್ಯನನ್ನಾಗಿ ಮಾಡಲು ಮತ್ತು ಜೀವನದಲ್ಲಿ ಯಶಸ್ವಿಯಾಗಲು ಸಾಕಾಗುವುದಿಲ್ಲ. ಜೀವನದಲ್ಲಿ ಯಶಸ್ಸಿಗೆ ಶಿಕ್ಷಣ ಅಗತ್ಯ. ಈ ರೀತಿಯ ಶಿಕ್ಷಣವನ್ನು ಜೀವನದಲ್ಲಿ ಶಾಲೆಗಳು ಒದಗಿಸುತ್ತವೆ. ಶಿಕ್ಷಣವನ್ನು ಪಡೆಯುವ ಮತ್ತು ಜೀವನದ ಗುರಿಗಳತ್ತ ಪ್ರಗತಿ ಸಾಧಿಸುವ ಸಂಸ್ಥೆ ಶಾಲೆಯಾಗಿದೆ.

ಎಂದರೆ ಶಿಸ್ತು ಶಿಕ್ಷಣ ಶಿಕ್ಷಕರು ಗೆಳೆಯರು ಮುಂತಾದ ಚಿತ್ರಣ ಕಣ್ಮುಂದೆ ಬರುತ್ತದೆ ಮಕ್ಕಳ ಸರ್ವಾಂಗೀಣ ಬೆಳವಣಿಗೆಯಲ್ಲಿ ಶಾಲೆಯ ಪಾತ್ರ ಅತ್ಯಂತ ದೊಡ್ಡದು. ಪ್ರತಿಯೊಂದು ಮಕ್ಕಳಿಗೂ ತಮ್ಮ ತಮ್ಮ ಶಾಲೆಯ ಬಗ್ಗೆ ಹೆಮ್ಮೆ. ನಾನು ಕಲಿತ ಶಾಲೆಯಲ್ಲಿ ಒಳ್ಳೆಯ ಹಾಗೂ ನುರಿತ ಶಿಕ್ಷಕರಿದ್ದರು ನಮಗೆ ಅರ್ಥವಾಗುವ ಹಾಗೆ ಉದಾಹರಣೆಗಳೊಂದಿಗೆ ಪಾಠ ಮಾಡುತ್ತಿದ್ದರು ಓದುವುದರ ಜೊತೆಗೆ ರಸಪ್ರಶ್ನೆ,ಪ್ರತಿಭಾ ಕಾರಂಜಿ, ಹಾಡಿನ ಸ್ಪರ್ಧೆ, ಕ್ರೀಡೆ ಮಾತ್ರವಲ್ಲದೆ ಮಕ್ಕಳ ಕೌಶಲ್ಯಾಭಿವೃದ್ಧಿಗೂ ಕೂಡ ಹಲವು ಚಟುವಟಿಕೆಗಳನ್ನು ಹೇಳಿಕೊಡುತ್ತಿದ್ದರು. ನಮ್ಮ ಶಾಲೆಯೇ ನಮಗೆ ನೆಚ್ಚಿನ ತಾಣ. ಶಾಲೆಗೆ ಹೋಗಲು ನಮಗೆ ಹೆಮ್ಮೆ ಇರುತ್ತಿತ್ತು. ನನ್ನ ಶಿಕ್ಷಕರು ಜ್ಞಾನ ಮತ್ತು ತಾಳ್ಮೆಯ ಪ್ರತಿರೂಪದವರು.

ಶಾಲೆಯ ಶಿಕ್ಷಕರ ಬಗ್ಗೆ ಹೇಳುವುದಾದರೆ ಶಾಲೆ ಒಂದು ದೇವಾಲಯ ಗುರುವೇ ಅಲ್ಲಿರುವ ಬ್ರಹ್ಮ ಕಣ್ಮುಚ್ಚಿ ಬೇಡಿಸುವಾತ ಆ ಬ್ರಹ್ಮ ಕಣ್ತೆರೆಸಿ ನಡೆಸುವಾತ ಗುರು ಬ್ರಹ್ಮ. ತಾನರಿತು, ಅರಿತು, ನುರಿತು ಏನನ್ನು ಅರಿಯದ ಮನಸುಗಳಿಗೆ ಬೆತ್ತದಿ ಬಡೆದು ಬಳಪದಿ ಬರೆದು ಅಕ್ಷರವ ಕಲಿಸುವ ಗುರು ಬ್ರಹ್ಮ. ಮಕ್ಕಳ ಮನವ ಅರಿತು ಏಳಿಗೆಯ ಪಥವ ತೋರಿಸಿ ಅಕ್ಷರ ಜ್ಞಾನವನ್ನು ನೀಡಿ ಅಂದಕಾರದ ಕತ್ತಲೆಯನ್ನು ಅಳಿಸಿದವರು ಶಿಕ್ಷಕರು. ಮನದಗುಡಿಯೊಳಗೆಗುರುವೆಂಬ ದೈವವು ಅಕ್ಷರಗಳ ದೀಪ ಹಚ್ಚಿ ವಿದ್ಯಾರ್ಥಿಗಳ ಭವಿಷ್ಯಕ್ಕೆ ಬೆಳಕ ನೀಡಿ ಶಿಸ್ತು ಸಹನೆ ನಂಬಿಕೆ ಪ್ರಾಮಾಣಿಕತೆ ಎಂಬ ಜೀವನದ ಮೂಲಗಳ ಕಲಿಸಿ ನಡೆ-ನುಡಿಗಳ ಬಗೆಗೆ ತಿಳಿಸಿ ಗುರಿ ಸಾಧನೆಯ ದಾರಿಯ ಬಗ್ಗೆ ಉತ್ತಮ ಮಾರ್ಗದರ್ಶನ ನೀಡಿ ಬದುಕಿಗೆ ಶಕ್ತಿಯಾಗಿ ಜೀವಕ್ಕೆ ಉಸಿರಾಗಿ ಒಬ್ಬ ವಿದ್ಯಾರ್ಥಿಗೆ ತಂದೆಯಾಗಿ ತಾಯಿಯಾಗಿ ಗುರುವಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯ ಇರುವುದು ಒಬ್ಬ ಶಿಕ್ಷಕನಿಗೆ ಮಾತ್ರ. ಇದು ಬರೀ ಶಾಲೆ ಅಲ್ಲ ಸಂಬಂಧಗಳ ನೆಲೆ ಜೊತೆಗೆ ಕೊಂಡೊಯ್ಯುವೆವು ಶಿಕ್ಷಕರಿಂದ ಪಡೆದ ಸ್ಫೂರ್ತಿಯ ಸೆಲೆ. ಒಟ್ಟಿನಲ್ಲಿ ಇದು ನನ್ನ ಹೆಮ್ಮೆಯ ಶಾಲೆ.

**ಕು. ಜ್ಯೋತಿ ಆನಂದ ಚಂದುಕರ ಬಾಗಲಕೋಟ**



## ಡಾ. ಸಚಿನ್ ಬಕರೆಗೆ ರಾಜ್ಯ ಶ್ರೇಷ್ಠ ವೈದ್ಯ ಪ್ರಶಸ್ತಿ




**ಬನಹಟ್ಟಿ :** ಕರ್ನಾಟಕ ಸರಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಡ ಮಾಡುವ ರಾಜ್ಯ ಶ್ರೇಷ್ಠ ವೈದ್ಯ ಪ್ರಶಸ್ತಿಯನ್ನು ಇಲ್ಲಿನ ವೈದ್ಯ ಡಾ. ಸಚೀನ ವಿಠ್ಠಲ ಬಕರೆ ಪಡೆದುಕೊಂಡಿದ್ದಾರೆ. ರಾಷ್ಟ್ರೀಯ ವೈದ್ಯ ದಿನಾಚರಣೆ ನಿಮಿತ್ಯ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ ಮಾಡಿದರು.

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಆರೋಗ್ಯ ಕೇಂದ್ರದಲ್ಲಿ ಅರ್ಥೋಪೆಡಿಕ್ ವಿಭಾಗದಲ್ಲಿ ಸೇವೆ ಸಲ್ಲಿಸಿದ ಸಾಧನೆಯನ್ನು ಗುರುತಿಸಿ ಬಕರೆಯವರಿಗೆ ಪ್ರಶಸ್ತಿ ನೀಡಲಾಗಿದೆ. ಈ ಸಂದರ್ಭದಲ್ಲಿ ಆರೋಗ್ಯ ಸಚಿವ ದಿನೇಶ ಗುಂಡುರಾವ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯ ಆಯುಕ್ತ ಡಿ. ರಂದೀಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮಹಿಳೆಯರ ಸ್ವಾವಲಂಬಿ ಬದುಕಿಗೆ ಕಲಿಕೆ ಅಗತ್ಯ: ಎಂ. ಗುಡ್ಡಪ್ಪ



**ಮಹಾಲಿಂಗಪುರ :** ಮಹಿಳೆಯರು ಹೊಲಿಗೆ, ಕಸೂತಿ ಸೇರಿದಂತೆ ವಿವಿಧ ಕಲಿಕೆಗಳನ್ನು ಕಲಿತು ಸ್ವಯಂ ಉದ್ಯೋಗದ ಮೂಲಕ ಸ್ವಾವಲಂಬಿಯಾಗಿ ಜೀವನ ನಡೆಲು ಮತ್ತು ಮಹಿಳಾ ಸಬಲೀಕರಣಕ್ಕೆ ಸ್ವಯಂ ಉದ್ಯೋಗ ತರಬೇತಿಯು ಸಹಕಾರಿಯಾಗಲಿದೆ ದಾವಣಗೆರೆಯ ಸ್ಫೂರ್ತಿ ನಗರ ಗ್ರಾಮೀಣಾಭಿವೃದ್ಧಿ ಮತ್ತು ಸ್ವಯಂ ಉದ್ಯೋಗತರಬೇತಿ ಸಂಸ್ಥೆಯ ರಾಜ್ಯ ಸಂಘಟಕ ಎಂ.ಗುಡ್ಡಪ್ಪ ಹೇಳಿದರು.

ಪಟ್ಟಣದ ಸಿದ್ಧಾರೂಢ ಬ್ರಹ್ಮವಿದ್ಯಾಶ್ರಮದಲ್ಲಿ ಪತ್ರಕರ್ತರ ಸಂಘ, ಹೊಳೆಮಠದ ಐರಣಿ ಮಹಾಸಂಸ್ಥಾನ ಹಾಗೂ ದಾವಣಗೆರೆಯ ಸ್ಫೂರ್ತಿ ನಗರ ಗ್ರಾಮೀಣಾಭಿವೃದ್ಧಿ ಮತ್ತು ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಆರಂಭಗೊಂಡ 100 ದಿನಗಳ ಮಹಿಳಾ ಉಚಿತ ಸ್ವಯಂ ಉದ್ಯೋಗ ತರಬೇತಿ ಶಿಬಿರದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಪುರಸಭೆ ಮುಖ್ಯಾಧಿಕಾರಿ ಈರಣ್ಣ ದಡ್ಡಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ ಪ್ರಸ್ತುತ ನಿರುದ್ಯೋಗ ಸಮಸ್ಯೆ ನಿವಾರಿಸುವಲ್ಲಿ ಸ್ವಯಂ ಉದ್ಯೋಗತರಬೇತಿ ಕಾರ್ಯಕ್ರಮಗಳು ಸಹಕಾರಿಯಾಗಿವೆ. ಇಂತಹ ಕಾರ್ಯಕ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳು ಹೆಚ್ಚಿಗೆ ಹಮ್ಮಿಕೊಳ್ಳಬೇಕು. ಮಹಿಳೆಯರು ಸ್ವಯಂ ಉದ್ಯೋಗ ತರಬೇತಿ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಪುರಸಭೆ ಸಮುದಾಯ ಸಂಘಟನಾಧಿಕಾರಿ ಸಿ.ಎಸ್. ಮಠಪತಿ, ಪತ್ರಕರ್ತರಾದ ಶಿವಾನಂದ ಕೊಣ್ಣೂರ, ಚಂದ್ರಶೇಖರ ಮೋರೆ ಮಾತನಾಡಿದರು.

ಸಿದ್ಧಾರೂಢ ಬ್ರಹ್ಮವಿದ್ಯಾಶ್ರಮದ ಸಹಜಾನಂದ ಸ್ವಾಮೀಜಿ ಸಾನಿಧ್ಯವಹಿಸಿದ್ದರು. ಕಾನಿಪ ಅಧ್ಯಕ್ಷ ಮಹೇಶ ಮನ್ನಯ್ಯನವಮಠ, ಮಂಜುಳಾ ಬಂಡಿವಡ್ಡರ, ಸಿದ್ದು ಧಡೂತಿ ಸೇರಿದಂತೆ ಹಲವರು ಇದ್ದರು.

# ಕುಷ್ಟಗಿ ಪುರಸಭೆ: ನಗರ ಕಲಿಕಾ ಪ್ರಾಯೋಗಿಕ ತರಬೇತಿಗೆ ಅರ್ಜಿ ಆಹ್ವಾನ

**ಕೊಪ್ಪಳ :** ಕುಷ್ಟಗಿ ಪುರಸಭೆ ವ್ಯಾಪ್ತಿಯಲ್ಲಿ ಡೇ ನಲ್ಮ್ ಅಭಿಯಾನ ಮತ್ತು ಪಿ.ಎಂ ಸ್ವನಿಧಿ ಯೋಜನೆ ಅಡಿಯಲ್ಲಿ ನಗರ ಕಲಿಕಾ ಮತ್ತು ಪ್ರಾಯೋಗಿಕ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕಲಿಕಾ ಮತ್ತು ಪ್ರಾಯೋಗಿಕ (ಟಿ.ಯು.ಎಲ್.ಐ.ಪಿ–ದ ಅರ್ಬನ್ ಲರ್ನಿಂಗ್ ಇಂಟರ್ನ್‌ಶಿಪ್ ಪ್ರೋಗ್ರಾಂ) ತರಬೇತಿ ಕಾರ್ಯಕ್ರಮವನ್ನು 2023–24ನೇ ಸಾಲಿಗೆ ಅನುಷ್ಠಾನಗೊಳಿಸಲು ಸರಕಾರದಿಂದ 05 ಗುರಿಗಳನ್ನು ನಿಗದಿ ಪಡಿಸಲಾಗಿದ್ದು, ಬೀದಿ ಬದಿ ವ್ಯಾಪಾರಿಗಳ ಕುರಿತು ಅಧ್ಯಯನ ಮಾಡುವುದು, ಜ್ಞಾನ ಮತ್ತು ಕೌಶಲ್ಯ ವೃದ್ಧಿಸಿಕೊಳ್ಳಲು ಅವಕಾಶ ಕಲ್ಪಿಸಿ ಕೊಡುವುದು ಈ ತರಬೇತಿಯ ಮುಖ್ಯ ಉದ್ದೇಶವಾಗಿದೆ.

ಆದ್ದರಿಂದ ಕುಷ್ಟಗಿ ಪುರಸಭೆ ವ್ಯಾಪ್ತಿಯ ಡಿಪ್ಲೋಮಾ, ಪದವಿ, ಸ್ನಾತಕೋತ್ತರ ಪದವಿಯಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ದಾಖಲಾತಿಗಳೊಂದಿಗೆ ಜುಲೈ 08 ರೊಳಗಾಗಿ ಕೇಂದ್ರ ಸರ್ಕಾರದ ವೆಬ್‌ಸೈಟ್ Ministry of Housing and Urban Affairs ನಲ್ಲಿ https://internship.aicte-india.org/module_ulb/Dashboard/TulipMain/ ರ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿ ಅರ್ಜಿ ಸಲ್ಲಿಸುವಂತೆ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರಮಕ್ಕೆ ತಕ್ಕ ಪ್ರತಿಫಲ ನಿಶ್ಚಿತ: ಶಾಸಕ ಸಿದ್ದು ಸವದಿ

**ಮಹಾಲಿಂಗಪುರ:** ವಿದ್ಯಾರ್ಥಿಗಳು ಕಠಿಣ ಪರಿಶ್ರಮ ವಹಿಸಿ ಓದಿನತ್ತ ಹೆಚ್ಚಿನಗಮನಕೊಡಬೇಕು,ಶ್ರಮಕ್ಕೆ ಸಾರ್ಥಕತೆ ತಕ್ಷಣ ಸಿಗದಿದ್ದರೂ ತಡವಾಗಿಯಾದರೂ ಅದರ ಪ್ರತಿಫಲ ಸಿಗುವುದು ನಿಶ್ಚಿತ ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಪಟ್ಟಣದ ಕೌಜಲಗಿ ನಿಂಗಮ್ಮ ಭವನದಲ್ಲಿ ಜರುಗಿದ ಸರ್ಕಾರಿ ಪದವಿ ಪೂರ್ವಕಾಲೇಜಿನಪ್ರಸಕ್ತ ಸಾಲಿನ ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ಪಿಯು ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಇಂದಿನದಿನಗಳಲ್ಲಿಸರ್ಕಾರಿನೌಕರಿ ಸಿಗುವುದು ತೀರಾ ದುರ್ಲಭ. ಹೀಗಾಗಿ, ವಿದ್ಯಾರ್ಥಿಗಳು ಉತ್ತಮ ಹವ್ಯಾಸ ಬೆಳೆಸಿಕೊಳ್ಳಬೇಕು. ನೌಕರಿ ಸಿಗದಿದ್ದರೂ ಸಹ ಸ್ವಾವಲಂಬಿಯಾಗಿ ಬದುಕು ಕಟ್ಟಿಕೊಳ್ಳುವ ಛಲವನ್ನು ರೂಪಿಸಿಕೊಳ್ಳಬೇಕು ಎಂದರು.



ಪುರಸಭೆ ಮಾಜಿ ಅಧ್ಯಕ್ಷ ಜಿ.ಎಸ್.ಗೊಂಬಿ ಮಾತನಾಡಿ, ಇಂದು ನಮ್ಮ ಆಹಾರ ಪದ್ಧತಿ ಹಾಳಾಗುತ್ತಿದೆ. ಇದರಿಂದ ಮಕ್ಕಳಲ್ಲಿ ಶಕ್ತಿ ಕಾಣುತ್ತಿಲ್ಲ ಇದು ತೀರಾ ಖೇದಕರಸಂಗತಿಯಾಗಿದೆ. ಮಕ್ಕಳು ಸರಿಯಾಗಿ ಮನೆಯಲ್ಲಿ ಊಟ ಮಾಡುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

ಎಸ್.ಎಸ್.ಸುವರ್ಣಖಂಡಿ,ಆರ್. ಎಂ.ಬಿರಾದರ, ಚಂದ್ರಶೇಖರ ಮೋರೆ ಮಾತನಾಡಿದರು. ಕಾಲೇಜಿನ ಪ್ರಾಚಾರ್ಯ ಎಸ್. ಆರ್. ನಾಯಕೋಡಿ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತಿ ಹೊಂದಿದ ಸಮಾಜಶಾಸ್ತ್ರ ಉಪನ್ಯಾಸಕ ಎಸ್.ಸಿ. ಬೊಮ್ಮಣ್ಣವರ ದಂಪತಿಗಳನ್ನು ಸನ್ಮಾನಿಸಲಾಯಿತು. ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಪ್ರಶಾಂತ ಮುಕ್ಕೆನ್ನವರ, ಉಪಾಧ್ಯಕ್ಷ ಶಿವಾನಂದ ಹುಣಶ್ಯಾಳ, ಶರತ್ ಜಂಬಗಿ, ಎಲ್.ಬಿ.ತುಪ್ಪದ, ನಂದು ಲಾತೂರ, ಜಿ.ಬಿ.ಸಜ್ಜನ, ಶಿವಾನಂದ ಮೆಳವಂಕಿ, ಕಾನಿಪ ಅಧ್ಯಕ್ಷ ಮಹೇಶ ಮನ್ನಯ್ಯನವಮಠ ಅತಿಥಿಗಳಾಗಿ ಭಾಗವಹಿಸಿದ್ದರು.

ವಿಷ್ಣು ಬಡಿಗೇರ ಸ್ವಾಗತಿಸಿದರು. ಸದಾಶಿವ ಮೇತ್ರಿ ನಿರೂಪಿಸಿದರು. ರಾಜಶ್ರೀ ತುಕ್ಕಾನಟ್ಟಿ ವಂದಿಸಿದರು.

# ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ತರಬೇತಿ



**ಬಾಗಲಕೋಟೆ :** ಜಲ ಜೀವನ ಮಿಷನ ಯೋಜನೆಯಡಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಜಿಲ್ಲಾ ಮಟ್ಟದ ಫೀಲ್ಡ್ ಟೆಸ್ಟ್ ಕಿಟ್ (ಎಫ್‌ಟಿಕೆ) ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರ ಮಂಗಳವಾರ ನಡೆಯಿತು.

ಜಿಲ್ಲಾ ಪಂಚಾಯತ್ ಬಾಗಲಕೋಟೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಬಾಗಲಕೋಟೆ ಸಹಯೋಗದಲ್ಲಿ ನಡೆದ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ನೀರಿನ ಗುಣಮಟ್ಟ, ಸದುಪಯೋಗ, ಕುರಿತು ಮತ್ತು ಮುಂಗಾರು ಮಳೆ ಪ್ರಾರಂಭವಾಗಿರುವುದರಿಂದ ಕಲುಷಿತ ನೀರು ಕುಡಿಯುವ ನೀರಿನಲ್ಲಿ ಸೇರುವ ಸಾಧ್ಯತೆ ಇರುವುದರಿಂದ ಪರೀಕ್ಷೆಗೆ ಒಳಪಡಿಸಲಾದ ನೀರನ್ನು ಮಾತ್ರ ಉಪಯೋಗಿಸುವುದು ಮತ್ತು ಕಾಲಕಾಲಕ್ಕೆ ಎಫ್.ಟಿ.ಕೆ ಬಳಸಿ ನೀರಿನ ಶುದ್ಧತೆಯನ್ನು ಪರೀಕ್ಷಿಸುವ ಮೂಲಕ ಶುದ್ಧ ಕುಡಿಯುವ ನೀರು ಒದಗಿಸುವುದು ಮುಖ್ಯ ಕರ್ತವ್ಯವಾಗಿದೆ. ತರಬೇತಿಯ ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು.

ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಗ್ರಾಮೀಣ ಕುಡಿಯುವ ನೀರು ಯೋಜನೆಯ ಕಾರ್ಯನಿರ್ವಾಹಕ ಅಭಿಯಂತರ ಆರ್. ಎನ್.ಪುರೋಹಿತ ಅಶುದ್ಧ ನೀರು ಕಂಡುಬಂದ ತಕ್ಷಣ ಇಲಾಖೆ ಪ್ರಯೋಗಾಲಯಕ್ಕೆ ಕೂಡಲೇ ಮಾಹಿತಿಯನ್ನು ನೀಡತಕ್ಕದ್ದು. ಪರೀಕ್ಷಿಸಿದ ನಂತರ ಕುಡಿಯುವ ನೀರು ಒದಗಿಸಬೇಕೆಂದು ಸಲಹೆಯನ್ನು ನೀಡಿದರು.

ಕಾರ್ಯಾಗಾರದಲ್ಲಿಜಿಲ್ಲಾಯೋಜನೆವ್ಯವಸ್ಥಾಪಕರು,ಹಿರಿಯವಿಶ್ಲೇಷಕರು, ಕಿರಿಯ ವಿಶ್ಲೇಷಕರು, ಡಿ.ಟಿ.ಎಸ್.ಯು ಜಿಲ್ಲಾ ಸಮಾಲೋಚಕರು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ವಾಟರ್ ಮ್ಯಾನ್ ಗಳು ಪಾಲ್ಗೊಂಡಿದ್ದರು.

# ವ್ಯಕ್ತಿ ಕಾಣೆ



**ಬಾಗಲಕೋಟೆ :** ಬಾದಾಮಿಯ ಟಿಪ್ಪು ನಗರದ ಪ್ರಕಾಶ ರಾಜಪ್ಪ ಬಿಂಗೇರಿ (48) ಡಿಸೆಂಬರ 25, 2023 ರಂದು ಬಸ್ ನಿಲ್ದಾಣದ ಕಡೆ ಹೋಗಿ ಬರುವುದಾಗಿ ಹೇಳಿ ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದಾರೆ. ಈ ಕುರಿತು ಬಾದಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಅದರಿ ವ್ಯಕ್ತಿಯ ಬಗ್ಗೆ ಮಾಹಿತಿ ದೊರೆತಲ್ಲಿ ಬಾದಾಮಿ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕ ಕಚೇರಿಗೆ ನೀಡುವಂತೆ ಪ್ರಕಟಣೆ ತಿಳಿಸಿದೆ.


# ಮಣ್ಣೆತ್ತಿನ ಅಮವಾಸ್ಯೆ: ಕೃಷಿ ಸಮೃದ್ಧಿಯ ಆಶಯದ ಹಬ್ಬ

ಡಾ. ಪ್ರಕಾಶ ಗ. ಖಾಡೆ
ಚಿತ್ರ : ಬಸವರಾಜ ಗವಿಮಠ

ಮಣ್ಣು ಒಕ್ಕಲು ಮಕ್ಕಳಿಗೆ ಅತ್ಯಂತ ಪವಿತ್ರವಾದುದು. ವರ್ಷಾರಂಭದಿಂದ ಐದು ಮುಖ್ಯ ಮಣ್ಣಿನ ಪೂಜೆಯನ್ನು ನೆರವೇರಿಸುವ ಸಂಪ್ರದಾಯವಿದೆ. ಆಷಾಢ, ಶ್ರಾವಣ ಮತ್ತು ಭಾದ್ರಪದ ಮಾಸಗಳು ಮಣ್ಣು ಪೂಜೆಯದ್ಯೋತಕವಾಗಿವೆ, ಮಣ್ಣೆತ್ತು, ಗುಳ್ಳವ್ವ, ಹುತ್ತಪ್ಪ, ಗಣಪ್ಪ ಹಾಗೂ ಜೋಕುಮಾರ ಈ ಐದೂ ಮಣ್ಣಿನಿಂದ ಮಾಡಿದ ದೈವಗಳನ್ನು ಮೂರು ಮಾಸಗಳಲ್ಲಿ ಪೂಜಿಸುತ್ತಾರೆ. ಜ್ಯೇಷ್ಠ ಬಹುಳ ಅಮವಾಸ್ಯೆಗೆ ಮಣ್ಣೆತ್ತಿನ ಅಮವಾಸ್ಯೆ ಎಂದು ಕರೆ–ಯುತ್ತಾರೆ. ಮಣ್ಣಿನಿಂದ ಎತ್ತುಗಳನ್ನು ಮಾಡಿ ಪೂಜಿಸುವ ಸಂಪ್ರದಾಯದ ಮುಂಗಾರಿನ ಆರಂಭದ ಹಬ್ಬ ಮಣ್ಣೆತ್ತಿನ ಅಮವಾಸ್ಯೆ. ಕಾರಹುಣ್ಣಿವೆ ನಂತರ ಬರುವ ಈ ಹಬ್ಬ ರೈತಾಪಿ ಜನರು ತಮ್ಮ ಬದುಕಿಗೆ ಆಸರೆಯಾಗಿರುವ ಎತ್ತುಗಳನ್ನು ಪೂಜಿಸಿ ಸಂಭ್ರಮ ಪಡುವ ಹಬ್ಬವಾಗಿದೆ. ಕೃಷಿಕರ ಅತ್ಯಂತ ಒಡನಾಡಿಯಾಗಿರುವ ದನಕರುಗಳನ್ನು ಕಾರ ಹುಣ್ಣಿಮೆಯಲ್ಲಿ ವಿಶೇಷವಾಗಿ ಮೈ ತೊಳೆದು, ಬಣ್ಣ ಹಚ್ಚಿ, ವಿವಿಧ ಪರಿಕರಗಳಿಂದ ಸಿಂಗಾರ



ಮಾಡಿ, ಹೋಳಿಗೆ, ಕಡಬು ಮುಂತಾದ ಸಿಹಿ ತಿನಿಸುಗಳನ್ನು ಮಾಡಿ ಎಡೆ ಹಿಡಿದು ಸಂಜೆಗೆ ಕರಿ ಹರಿಯುವ ಸಂಭ್ರಮ ಹೇಳತೀರದು. ದನಕರುಗಳನ್ನು ಮನಬಂದಂತೆ ಓಡಾಡಿಸುವ ಮೂಲಕ ತಿಂಗಳೊಪ್ಪತ್ತಿನಿಂದ ವಿಶ್ರಾಂತಿಗೆ ಸರಿದಿದ್ದ ಅವುಗಳನ್ನು ಮತ್ತೆ ಕೃಷಿ ಕಾಯಕ–ಕ್ಕೆ ಸಜ್ಜು ಮಾಡುತ್ತಾರೆ. ಕಾರ ಹುಣ್ಣಿವೆ ಮುಗಿದು ಬರುವ ಅಮವಾಸ್ಯೆಯೇ ಮಣ್ಣೆತ್ತಿನ ಅಮವ್ಯಾಸ್ಯೆ. ಹೊಲಗಳಿಗೆ ಹೋಗಿ ಜಿಗುಟಿನಿಂದ ಕೂಡಿದ ಮಣ್ಣನ್ನು ತಂದು ಎತ್ತುಗಳನ್ನು ತಯಾರಿಸುತ್ತಾರೆ. ಭೂತಾಯಿಯನ್ನು ಉಳುವ ಸಂಕೇತವಾದ ಎತ್ತುಗಳನ್ನು ದೊಡ್ಡ ಸಣ್ಣ ಆಕಾರಗಳಲ್ಲಿ ತಯಾರಿಸಿಕೊಳ್ಳುತ್ತಾರೆ. ಇಲ್ಲವೇ ಊರ ಕುಂಬಾರ ಮನೆಗಳಿಂದಲೂ ತಯಾರಿಸಿ ಜೋಡಿ ಎತ್ತುಗಳನ್ನು ಜೋಳ, ಕಾಳು, ಹಣಕೊಟ್ಟು ಖರೀದಿಸಿ ತರುತ್ತಾರೆ. ಕುಂಬಾರರು ಎತ್ತುಗಳೊಂದಿಗೆ ಒಂದಿಷ್ಟು ಹಸಿ ಮಣ್ಣನ್ನೂ ಕೊಡುತ್ತಾರೆ. ಈ ಹಸಿ ಮಣ್ಣಲ್ಲಿ ದನಗಳಿಗೆ ಹುಲ್ಲು ತಿನ್ನಲು ಗ್ವಾದಲಿ ಮಾಡುತ್ತಾರೆ. ಬಣ್ಣಗಳ ಬ್ಯಾಗಡಿ ಚೂರು, ಬಣ್ಣದಲ್ಲಿ ತೊಯಿಸಿದ ಜೋಳ. ಕುಸುಬಿ ಕಾಳುಗಳಿಂದ ಎತ್ತುಗಳಿಗೆ ಕೊಂಬಣಸು, ಇಣಿಗವಚ, ಜೂಲು, ತೋಡೆ, ಗಂಟೆ ಸರಗಳಿಂದ ಸಿಂಗರಿಸುತ್ತಾರೆ. ಸಿಂಗರಿಸಿದ ಜೋಡೆತ್ತುಗಳನ್ನು ನೋಡವುದೇ ಒಂದು ಸೊಗಸು. ನಂತರ ದೇವರ ಜಗುಲಿಯ ಮೇಲಿಟ್ಟು ಪೂಜೆಗೆ ಅಣಿಯಾಗುವ ಹೊತ್ತಿಗೆ ಮನೆ ಹೆಣ್ಣು ಮಕ್ಕಳು ಹೋಳಿಗೆ, ಕಡಬು ಸವಿ ಸವಿ ಅಡುಗೆ ಸಿದ್ದಪಡಿಸಿತ್ತಾರೆ. ಮನೆಯ ದನಕರುಗಳನ್ನೂ ಮೈತೊಳೆದು ಪೂಜೆಗೆ ಸಿಂಗರಿಸುತ್ತಾರೆ. ಮಣ್ಣೆತ್ತುಗಳಿಗೆ ಕಾಯಿ, ಕರ್ಪೂರ, ಊದುಬತ್ತಿ, ಲೋಬಾನ ಹಾಕಿ ಎಡೆ ಹಿಡಿದು ಪೂಜೆ ಮಾಡುತ್ತಾರೆ. ಸಕಲ ಜೀವ ರಾಸಿಗಳಿಗೆ ಅನ್ನ ಹಾಕುವ ಭೂತಾಯಿಗೆ ಈ ಮೂಲಕ ಪೂಜೆ ಸಲ್ಲಿಸಿ ಕೃತಜ್ಞತೆ ಅರ್ಪಿಸುತ್ತಾರೆ. ಹೊಸ ಬಟ್ಟೆಗಳನ್ನು ತೊಟ್ಟು ಊರಲ್ಲಿ ದೇವರುಗಳಿಗೆ ಕಾಯಿ, ಕರ್ಪೂರದೊಂದಿಗೆ ಹೋಗಿ ಎಡೆ ಹಿಡಿದು ಬಂದು ಒಟ್ಟಾಗಿ ಕುಳಿತು ಊಟ ಮಾಡುತ್ತಾರೆ. ಸಂಜೆ ಆರತಿ ಹಿಡಿದ ಹೆಣ್ಣುಮಕ್ಕಳು ಮನೆ ಮನೆ ತೆರಳಿ ಪೂಜಿತ ಎತ್ತುಗಳಿಗೆ ಆರತಿ ಬೆಳಗಿ ಸಂಭ್ರಮಿಸುತ್ತಾರೆ. ಮರುದಿನ ಮಕ್ಕಳು ಎತ್ತುಗಳನ್ನು ತೆಗೆದುಕೊಂಡು ಅದರಲ್ಲಿ ಒಂದು ಎತ್ತಿನ ಕಾಲು ಮುರಿದು ತಟ್ಟೆಯಲ್ಲಿಟ್ಟುಕೊಂಡು ಮನೆ ಮನೆಗೆ ತೆರಳಿ 'ಎಂಟತ್ತಿನ್ಯಾಗ ಒಂದ ಕುಂಟೆತ್ತ ಬಂದೈತಿ ಜ್ವಾಳಾ ನೀಡಿರಿ' ಎಂದು ತಿರುಗ–ುತ್ತಾರೆ. ಮನೆಯವರು ಜೋಳ, ಗೋದಿ, ಸಜ್ಜೆ, ಅಕ್ಕಿ, ಹಣ ನೀಡಿ ಕಳಿಸುತ್ತಾರೆ. ಸಂಗ್ರಹಿಸಿದ ದವಸ ಧಾನ್ಯಗಳನ್ನು ಊರ ಅಂಗಡಿಗೆ ಹಾಕಿ ಪಂಚ ಪಳಾರ, ಊದಬತ್ತಿ, ಕುಂಕುಮ, ವಿಭೂತಿ, ಟೆಂಗಿನಕಾಯಿ, ಬೆಲ್ಲ, ಚುರಮುರಿ ಖರೀದಿಸುತ್ತಾರೆ. ಎತ್ತುಗಳನ್ನು ತೆಗೆದು–ಕೊಂಡು ಹೊಳೆ, ಕೆರೆ, ಹಳ್ಳದ ದಂಡೆಗೆ ಹೋಗಿ ಅಲ್ಲಿ ಎಲ್ಲ ಮಣ್ಣೆತ್ತುಗಳ ಮುಖ ತೊಳೆದು ವಿಭೂತಿ, ಕುಂಕುಮ ಹಚ್ಚಿ ಉದುಬತ್ತಿ ಬೆಳಗಿ ಪಂಚ ಪಳಾರು ಹಾಕಿ, ಕಾಯಿ ಒಡೆದು ಕಾಲು ಮುಗಿದು ಊರ ಸಮೃದ್ಧಿಗೆ ಬೇಡಿಕೊಂಡು ಎತ್ತುಗಳನ್ನು ಹೊಳೆಗೆ ಬಿಡುತ್ತಾರೆ. ನಂತರ ದಾರಿಯಲ್ಲಿ ಸಿಕ್ಕವರಿಗೆ ಪಳಾರು ಹಂಚುತ್ತಾರೆ. ಇದು ಹಳ್ಳಿಯ ಮಕ್ಕಳ ಮಣ್ಣೆತ್ತಿನ ಅಮವಾಸ್ಯೆಯ ಸಂಭ್ರಮ. ಭೂತಾಯಿಗೆ ರೈತಾಪಿ ಜನ ಮಳೆ ಬೆಳೆ ಚೆನ್ನಾಗಿ ಆಗಲೆಂದು ಕೃಷಿ ವರ್ಷಾರಂಭದಲ್ಲಿ ಬೇಡಿಕೊಳ್ಳುವ ಹಬ್ಬವಾಗಿದೆ. #



**ಅರಳೆಲೆ ಬಸವನ ಹಾಡು :**

ಅಮವಾಸ್ಯೆಗೆ ಹಳ್ಳಿಯ ಹೆಣ್ಣು ಮಕ್ಕಳು ಅರಳೆಲೆ ಬಸವನನ್ನು ಎಲೆಯ ಮಂಟಪದಲ್ಲಿ ಸಿಂಗಾರ ಮಾಡಿ ಊರ ಮಠದಲ್ಲಿಟ್ಟು ಪೂಜೆ ಮಾಡಿ ಹಾಡು ಹೇಳುತ್ತಾರೆ. ಕನ್ನಡದ ಮೊದಲ ಜಾನಪದ ಸಂಶೋಧನಾ ಪ್ರಬಂಧಕಾರ ಬಾದಾಮಿ ತಾಲೂಕು ಕೆರೂರಿನ ಡಾ.ಬಿ.ಎಸ್.ಗದ್ದಗಿಮಠರು ಸಂಗ್ರಹಿಸಿದ ಹೆಣ್ಣು ಮಕ್ಕಳು ಹಾಡುವ ಅರಳೆಲೆ ಬಸವನ ಪದ ಹೀಗಿದೆ.




ಒಂದು ಸುತ್ತಿನ ಕ್ವಾಟಿ
ಅದರೊಳು ಹೊಂದಿ ನಿಂತನು ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಎರಡು ಸುತ್ತಿನ ಕ್ವಾಟಿ
ಅದರೊಳು ಸೊಡರು ತೂಗುವ ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಮೂರು ಸುತ್ತಿನ ಕ್ವಾಟಿ
ಅದರೊಳು ಮೂರ್ತಗೊಂಡನ ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ನಾಲ್ಕು ಸುತ್ತಿನ ಕ್ವಾಟಿ
ಅದರೊಳು ನ್ಯಾಯಮೂರ್ತಿಯು ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಐದು ಸುತ್ತಿನ ಕ್ವಾಟಿ
ಅದರೊಳು ಐಕ್ಯಮೂರ್ತಿಯು ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಆರು ಸುತ್ತಿನ ಕ್ವಾಟಿ
ಅದರೊಳು ಅರಳಿ ನಿಂತಾನ ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಏಳು ಸುತ್ತಿನ ಕ್ವಾಟಿ
ಅದರೊಳು ಜಗವನಾಳುವ ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಎಂಟು ಸುತ್ತಿನ ಕ್ವಾಟಿ
ಶಿವನಿಗೆ ಕಂಟಲೆತ್ತೇನೋ ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಒಂಭತ್ತು ಸುತ್ತಿನ ಕ್ವಾಟಿ
ಅದರೊಳು ತುಂಬಿ ಬಂದಾನೊ ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.
ಹತ್ತು ಸುತ್ತಿನ ಕ್ವಾಟಿ
ಅದರೊಳು ಸುತ್ತ ನೋಡಲು ಬಸವ
ಬಸವಕ ಬಸವೆನ್ನಿರೆ
ಬಸವನ ಪಾದಕ ಶರಣನ್ನಿರೆ.

ಹೀಗೆ ನಮ್ಮ ಹಳ್ಳಿಯ ಹೆಣ್ಣುಮಕ್ಕಳು ಸೇರಿ ಮನದುಂಬಿ ಹಾಡಿ ಹಾರೈಸಿ ಬಸವನ ಪೂಜೆ ನೆರವೇರಿಸುತ್ತಾರೆ.



। ಡಾ. ಪ್ರಕಾಶ ಗ. ಖಾಡೆ,
ಮನೆ ನಂ.ಎಸ್.135, ಸೆಕ್ಟರ್ ನಂ.63,
ನವನಗರ, ಬಾಗಲಕೋಟೆ–587103
ಮೊ.9845500890

# 2 ಮರಿಗಳ ಸಮೇತ 12 ಅಡಿ ಉದ್ದದ ಹೆಣ್ಣು ಮೊಸಳೆ ಸೆರೆ



**ಮುದ್ದೇಬಿಹಾಳ** : ತಾಲೂಕಿನ ಕೃಷ್ಣಾ ನದಿ ತೀರದಲ್ಲಿರುವ ಬಂಗಾರಗುಂಡ-ಕಪನೂರ ಗ್ರಾಮ ವ್ಯಾಪ್ತಿಯ ತೆರೆದ ಬಾವಿಯ ಪಕ್ಕ ಭೂಮಿಯಲ್ಲಿ ಗೂಡು ಮಾಡಿಕೊಂಡು 15 ದಿನಗಳ ವಯಸ್ಸಿನ ತನ್ನ ಎರಡು ಮರಿಗಳೊಂದಿಗೆವಾಸವಾಗಿದ್ದ 12 ಅಡಿಉದ್ದದಹೆಣ್ಣುಮೊಸಳೆಯನ್ನು ಅರಣ್ಯ ಇಲಾಖೆಯ ಸಿಬ್ಬಂದಿ ಶುಕ್ರವಾರಸಂಜೆಸೆರೆಹಿಡಿದುಅದನ್ನು ನಾರಾಯಣಪುರ ಜಲಾಶಯದ ಹಿನ್ನೀರಿನಲ್ಲಿ ಸುರಕ್ಷಿತವಾಗಿ ಬಿಡುವ ಮೂಲಕ ಗ್ರಾಮಸ್ಥರ ಆತಂಕ ನಿವಾರಿಸಿದರು. ಬಹಳ ದಿನಗಳಿಂದ ಈ ಮೊಸಳೆ ತೆರೆದ ಬಾವಿಯೊಂದರಲ್ಲಿವಾಸವಾಗಿದ್ದು ರಾತ್ರಿ ಹೊರಗೆ ಬರುವುದು, ಹಗಲು ನೀರಲ್ಲಿರುವುದು ಮಾಡುತ್ತಿತ್ತು. ಬಾವಿಯಲ್ಲಿ ನೀರು ಕಡಿಮೆಯಾದ ಮೇಲೆ ಬಾವಿಯ ಪಕ್ಕದಭೂಮಿಯಲ್ಲಿದ್ದಗೂಡಿನಲ್ಲಿ ವಾಸವಾಗಿತ್ತು. ಮೇಲಿಂದ ಮೇಲೆ ಇದು ಜನರ ಕಣ್ಣಿಗೆ ಬಿದ್ದು ಆತಂಕ ಸೃಷ್ಟಿಸಿತ್ತು. ಇದನ್ನು ಅರಣ್ಯ ಇಲಾಖೆಯವರ ಗಮನಕ್ಕೆ ತಂದಾಗ ಅವರು ಬಂದು ಮೊಸಳೆ ಸೆರೆ ಹಿಡಿದರು ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಮುದ್ದೇಬಿಹಾಳ ಪ್ರಾದೇಶಿಕ ಅರಣ್ಯ ಇಲಾಖೆಯ ಆರ್‌ಎಫ್‌ಒಬಸನಗೌಡಬಿರಾದಾರ ಅವರ ಮಾರ್ಗದರ್ಶನದಲ್ಲಿ ಎಆರ್‌ಎಫ್‌ಒಗಳಾದ ಮಲ್ಲಪ್ಪ ತೇಲಿ, ವಿಜಯಕುಮಾರ ಕಿತ್ತೂರ ಅವರು ಮೊಸಳೆ ಹಿಡಿಯುವಲ್ಲಿ ಪರಿಣಿತಿಹೊಂದಿರುವಇಲಾಖೆಯ ಸಿಬ್ಬಂದಿ ನಾಗೇಶ ಮೋಪಗಾರ ಎಂಬಾತನ ನೆರವಿನಿಂದ ಸಂಜೆ ಮೊಸಳೆಯನ್ನು ಗೂಡಿನಿಂದ ಹೊರಗೆ ಬರುವಂತೆ ಮಾಡಿ ಸೆರೆ ಹಿಡಿದರು. ಕೋಲು, ಹಗ್ಗ ಬಳಸಿ ಮಿಸುಕಾಡದಂತೆ ಕಟ್ಟಿ ವಾಹನದ ಮೂಲಕ ಹಿನ್ನೀರಿಗೆ ಸಾಗಿಸಿ ಸುರಕ್ಷಿತವಾಗಿ ಬಿಡಲು ಕ್ರಮ ಕೈಕೊಂಡರು. ಗ್ರಾಮದ ಯುವಕರಾದ ಪರಶುರಾಮ ಕಪನೂರ, ರುದ್ರಗೌಡ ಪಾಟೀಲ, ಗ್ರಾಮಸ್ಥರು ಸಹಕರಿಸಿದರು.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಆರ್‌ಎಫ್‌ಒ ಬಿರಾದಾರ ಅವರು ಈ ಮೊಸಳೆಯಿಂದ ಯಾರಿಗೂ ಅಪಾಯ ಸಂಭವಿಸಿಲ್ಲ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಹಗಲು ಜನಸಂಚಾರ ಕಂಡು ಬಂದಾಗ ತನ್ನ ಗೂಡಿನಲ್ಲಿ ಹೋಗಿ ಅಡಗಿಕೊಳ್ಳುತ್ತಿದ್ದ ಇದು ರಾತ್ರಿ ವೇಳೆ ಮತ್ತು ಜನಸಂಚಾರ ಇಲ್ಲದ ವೇಳೆ ಆಹಾರ ಅರಸಲು ಹೊರಗೆ ಬರುತ್ತಿತ್ತು. ಇದು ಜನರಲ್ಲಿ ಆತಂಕ ಉಂಟು ಮಾಡಿದ್ದರಿಂದ ಸೆರೆ ಹಿಡಿದು ಸುರಕ್ಷಿತವಾಗಿ ಮರಿಗಳ ಸಮೇತ ನದಿಯಲ್ಲಿ ಬಿಡಲಾಗಿದೆ ಎಂದು ತಿಳಿಸಿದರು.

# ಸ್ವಯಂ ಉದ್ಯಮ ಸ್ಥಾಪನೆಗೆ ಕೌಶಲ್ಯ ತರಬೇತಿ ನೀಡಿ: ಕಾಂತಾ ನಾಯಕ



**ವಿಜಯಪುರ :** ಜಿಲ್ಲೆಯ ಯುವಕ ಯುವತಿಯರಿಗೆ ಉದ್ಯೋಗ ಕೌಶಲ್ಯ ತರಬೇತಿ ನೀಡುವುದರ ಜೊತೆಗೆ ಸ್ವಯಂ ಉದ್ಯೋಗ ಸ್ಥಾಪನೆ ಮಾಡುವಂತೆ ಪ್ರೇರೆಪಿಸಬೇಕು ಎಂದು ಕನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಕಾಂತಾ ನಾಯಕ ಅವರು ಹೇಳಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆದ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 9 ಬೃಹತ್ ಪ್ರಮಾಣದ ಸಕ್ಕರೆ ಕಾರ್ಖಾನೆಗಳಿದ್ದು, 2022-23ನೇ ಸಾಲಿನಲ್ಲಿ ಒಟ್ಟು 9,476 ಉದ್ಯಮಗಳು ನೋಂದಣಿಯಾಗಿರುತ್ತವೆ. ಕೌಶಲ್ಯಾಭಿವೃದ್ಧಿ ಇಲಾಖೆಯೆ ಮುಖಾಂತರ ನಿರುದ್ಯೋಗಿ ಯುವಕ/ಯುವತಿಯರಿಗೆ ಅವರ ಅನುಭವ ಕೌಶಲ್ಯಗಳ ಆಧಾರದ ಮೇಲೆ ತರಬೇತಿಯನ್ನು ನೀಡಿ ಉದ್ಯೋಗ ಸೃಷ್ಟಿಗೆ ಕಾರ್ಯಪ್ರವೃತ್ತರಾಗಬೇಕು ಎಂದು ಹೇಳಿದರು.

ತರಬೇತಿಯೂ ಕೇವಲ ಉದ್ಯೋಗ ಕೊಡಿಸುವುದಷ್ಟೇ ಗುರಿಯಾಗಿರಬಾರದು, ಆತ್ಮ ವಿಶ್ವಾಸ ಬೆಳಸಿ ಅವರನ್ನು ಯಶಸ್ವಿ ಉದ್ಯಮಿಯಾಗಿ ಜೀವನ ನಡೆಸುವಂತೆ ಸ್ಫೂರ್ತಿದಾಯಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅವರ ಬೇಡಿಕೆಯನುಸಾರವಾಗಿ ವಿವಿಧ ತರಬೇತಿಗಳನ್ನು ನೀಡುವಲ್ಲಿ ಎಲ್ಲಾ ಇಲಾಖೆಗಳು ಸಮನ್ವಯತೆ ಸಾಧಿಸಿಬೇಕು ಎಂದರು.

ಜಿಲ್ಲೆಯಲ್ಲಿ ಸ್ಥಾಪನೆಗೊಂಡಿರುವ ಉದ್ಯಮ, ಇಂಡಸ್ಟ್ರಿಗಳಲ್ಲಿ ಸ್ಥಳೀಯ ಜನರಿಗೆ ಆಧ್ಯತೆಯನ್ನು ನೀಡಬೇಕು. ಜಿಲ್ಲೆಯಲ್ಲಿ ನಿರುದ್ಯೋಗ ಪ್ರಮಾಣ ಕಡಿಮೆಗೊಳಿಸಲು ಕಾರ್ಯಪ್ರವರ್ತರಾಗಬೇಕು ಎಂದು ಅವರು ಹೇಳಿದರು.

ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳಿಂದ ಸಿಎಸ್‌ಆರ್ ಅನುದಾನ ಪಡೆದು ನಿರುದ್ಯೋಗ ಯುವಕ ಯುವತಿಯರಿಗೆ ವ್ಯಕ್ತಿತ್ವ ವಿಕಸನ ಕಾರ್ಯಕ್ರಮ ಹಾಗೂ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಿ ಅವರನ್ನು ಉದ್ಯೋಗದಲ್ಲಿ ತೊಡಗುವಂತೆ ಮಾಡಬೇಕು ಎಂದರು.

ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರು ಮಾತನಾಡಿ, ಜಿಲ್ಲೆಯು ಪ್ರವಾಸೋಧ್ಯಮಕ್ಕೆ ಹೆಸರುವಾಸಿಯಾಗಿದೆ ಹಾಗೂ ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಕಾರ್ಯಾರಂಭವಾಗುವುದರಿಂದ ಪ್ರವಾಸಿ ಗೈಡ್ ಹಾಗೂ ವಿಮಾನ ನಿಲ್ದಾಣಗಳಲ್ಲಿ ಸ್ಥಳೀಯರು ಉದ್ಯೋಗವಕಾಶ ಪಡೆದುಕೊಳ್ಳಲು ಅನುಕೂಲವಾಗುವ ತರಬೇತಿ ಕಾರ್ಯಕ್ರಮಗಳನ್ನು ಸೃಜಿಸಿ ಅವರಿಗೆ ಅವಕಾಶ ಕಲ್ಪಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಸಿಡಾಕ್‌ನ ವತಿಯಿಂದ ತರಬೇತಿಯನ್ನು ಪಡೆದು ಸ್ವಯಂ ಉದ್ಯಮ ಸ್ಥಾಪಿಸಿದ ಉದ್ಯಮಿಗಳನ್ನು ಸನ್ಮಾನಿಸಲಾಯಿತು. ಸಭೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕನ್ನಾನ ಅಬ್ದುಲ್ ಹಮೀದ್ ಮುಶ್ರೀಫ್, ಜಿಲ್ಲಾ ಕೌಶಲ್ಯ ಅಭಿವೃದ್ಧಿ ನಿಗಮದ ಜಂಟಿ ನಿರ್ದೇಶಕ ಸಿ.ಬಿ. ಕುಂಬಾರ, ಕೈಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಶಾಂತ ಬಾರಿಗಿಡದ, ಸಿಡಾಕ್ ಜಂಟಿ ನಿರ್ದೇಶಕರಾದ ಎಸ್.ಬಿ. ಬಳ್ಳಾರಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರಾಜಶೇಖರ ವಿಲಿಯಮ್ಸ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬೌದ್ಧಿಕ ಸ್ವತ್ತನ್ನು ರಕ್ಷಿಸಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ




**ವಿಜಯಪುರ** : ಮನುಷ್ಯನ ಬೌದ್ಧಿಕ ಸಾಮರ್ಥ್ಯದಿಂದ ತಯಾರಾದ ಬೌದ್ಧಿಕ ಸ್ವತ್ತನ್ನು ರಕ್ಷಿಸಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ ವಾಗಿದೆ. ಅವುಗಳ ರಕ್ಷಣೆಗೆ ಇರುವ ಕಾನೂನುಗಳ ಅರಿವು ಎಲ್ಲರಿಗೂ ಇರಬೇಕು ಎಂದು ಬೆಂಗಳೂರಿನ ಅಲ್ವಾಸಿಟ್ ಗ್ಲೋಬಲ್ ಐಪಿಆರ್ ಅಟಾರ್ನಿ, ಸಹವರ್ತಿ ವಕೀಲೆ ಲಿಕಿತಾ ಪಿ.ಮಹ್ಡಿಕರ್ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಬೌದ್ಧಿಕ ಆಸ್ತಿ ಹಕ್ಕುಗಳ ಕೋಶ ಹಾಗೂ ವಿಶ್ವೇಶ್ವರಯ್ಯ ಟ್ರೇಡ್ ಪ್ರಮೋಷನ್ ಸೆಂಟರ್ ಮತ್ತು ಐಕ್ಯೂಎಸಿ ಸಹಯೋಗದೊಂದಿಗೆ ಶುಕ್ರವಾರ ಹಮ್ಮಿಕೊಂಡಿದ್ದ "ಬೌದ್ಧಿಕ ಆಸ್ತಿ ಹಕ್ಕುಗಳ ಜಾಗೃತಿ" ವಿಷಯದ ಕುರಿತು ಒಂದು ದಿನದ ಓರಿಯಂಟೇಶನ್ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬೌದ್ಧಿಕ ಆಸ್ತಿ ಹಕ್ಕುಗಳ ಪರಿಕಲ್ಪನೆ, ಟ್ರೇಡ್‌ಮಾರ್ಕ್ ಸಲ್ಲಿಸುವ ಕಾರ್ಯವಿಧಾನಗಳು, ಪೇಟೆಂಟ್, ಹಕ್ಕುಸ್ವಾಮ್ಯ, ಭೌಗೋಳಿಕ ಸೂಚನೆ, ವಿನ್ಯಾಸ, ಸಸ್ಯ ಪ್ರಭೇದಗಳು ಮತ್ತು ರೈತರ ಹಕ್ಕುಗಳು ಮತ್ತು ವ್ಯಾಪಾರ ರಹಸ್ಯಗಳಂತಹ ಎಲ್ಲಾ ಅಂಶಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿಕೊಟ್ಟರು.

ಇದೇ ಸಂದರ್ಭದಲ್ಲಿ ವಿಟಿಪಿಸಿ ಕರ್ನಾಟಕ ಸರ್ಕಾರ ರಫ್ತು ಉತ್ತೇಜನ ಕೇಂದ್ರದ ಐಪಿ ಇನಿಶಿಯೇಟಿವ್ಸ್ ಮತ್ತು ಜಿಐ ಕೋಶದ ಫೆಸಿಲಿಟೇಟರ್ ಪ್ರಭಾವತಿ ರಾವ್ ಮಾತನಾಡಿ, ಕರ್ನಾಟಕ ರಫ್ತುಗಳ ಕೊಡುಗೆ ಮತ್ತು ಐಪಿ ಪರಿಕರಗಳ ಫೈಲಿಂಗ್, ವಾಣಿಜ್ಯೀಕರಣ ಇದರ ಅರಿವು ಮತ್ತು ಬೌದ್ಧಿಕ ಹಕ್ಕುಗಳ ರಕ್ಷಣೆ ಹಾಗೂ ಇದರ ಕೊಡುಗೆಯನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಮಾತನಾಡಿ, ವಿವಿಧ ಬೌದ್ಧಿಕ ಆಸ್ತಿ ಹಕ್ಕುಗಳು ಅದರದೇ ಆದ ಮಹತ್ವವನ್ನು ಪಡೆದುಕೊಂಡಿದ್ದು ಎಲ್ಲರಿಗೂ ಇದರ ಅವಶ್ಯಕತೆ ಇದೆ ಎಂದರು.

ಕಾರ್ಯಕ್ರಮದಲ್ಲಿ ವಿವಿಯ ಮೌಲ್ಯಮಾಪನ ಕುಲಸಚಿವ ಎಚ್.ಎಂ.ಚಂದ್ರಶೇಖರ ಭಾಗವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಐಪಿಆರ್ ಕೋಶದ ಸಂಯೋಜಕ ಡಾ.ಎಸ್.ಆರ್ ಗಣೇಶ, ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಐಕ್ಯೂಎಸಿ ಕೋಶದ ನಿರ್ದೇಶಕ ಪ್ರೊ. ಪಿ.ಜಿ ತಡಸದ ಪ್ರಾಸ್ತಾವಿಕ ನುಡಿಗಳನ್ನಾಡಿ ಅತಿಥಿಗಳನ್ನು ಪರಿಚಯಿಸಿದರು. ಗ್ರಂಥಾಲಯ ವಿಜ್ಞಾನ ವಿಭಾಗದ ಸಂಶೋಧನಾ ವಿಧ್ಯಾರ್ಥಿನಿ ಶಿವಗಂಗಾ ನಿರೂಪಿಸಿದರು.

# ಡೆಂಗಿ ನಿಯಂತ್ರಣಕ್ಕೆ ಲಾರ್ವಾಹಾರಿ ಮೀನು ಬಿಡುವ ಕಾರ್ಯಕ್ರಮಕ್ಕೆ ಸಚಿವ ದಿನೇಶ ಗುಂಡೂರಾವ್ ಚಾಲನೆ



**ವಿಜಯಪುರ** : ಡೆಂಗಿ ನಿಯಂತ್ರಣಕ್ಕಾಗಿ ರಾಜ್ಯದಾದ್ಯಂತಹಮ್ಮಿಕೊಂಡಪ್ರತಿಶುಕ್ರವಾರ ಈಡೀಸ್ ಲಾರ್ವಾ ನಿರ್ಮೂಲನಾ ದಿನ ಹಾಗೂ ಲಾರ್ವಾಹಾರಿ ಮೀನು ಬಿಡುಗಡೆ ಅಭಿಯಾನಕ್ಕೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವರಾದ ದಿನೇಶ ಗುಂಡೂರಾವ್ ಅವರು ಶುಕ್ರವಾರ ನಗರದ ದರ್ಗಾ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚಾಲನೆ ನೀಡಿದರು.

ಇಂದು ನಗರದ ದರ್ಗಾ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಂಡ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಈ ಕಾರ್ಯಕ್ರಮ ರಾಜ್ಯದಾದ್ಯಂತ ಏಕ ಕಾಲದಲ್ಲಿ ಪ್ರತಿ ಜಿಲ್ಲೆ, ತಾಲೂಕು ಮಟ್ಟಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಅಭಿಯಾನದ ಮೂಲಕ ಡೆಂಗಿ ರೋಗ ಹರಡದಂತೆ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗೂ ಸ್ವಯಂ ಸೇವಾ ಸಂಸ್ಥೆಗಳೊಂದಿಗೆ ಸಮನ್ವಯತೆ ಸಾಧಿಸಿಕೊಂಡು ಡೆಂಗಿ ಜ್ವರದ ಹಾಗೂ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಪ್ರತಿ ಗ್ರಾಮದ ಮನೆ-ಮನೆಗಳಿಗೆ ತೆರಳಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಸಾರ್ವಜನಿಕರಿಗೆ ಮನೆಯಲ್ಲಿರುವ ಪಾತ್ರೆಗಳಲ್ಲಿ ನೀರನ್ನು ಹೆಚ್ಚು ದಿನ ತುಂಬಿ ಇಡದಂತೆ ಹಾಗೂ ಮುಚ್ಚಳ ಹಾಕುವಂತೆ, ಸುತ್ತಮುತ್ತಲಿನ ಪರಿಸರದಲ್ಲಿ ಅನಗತ್ಯ ನೀರು ನಿಲ್ಲದಂತೆ ನೋಡಿಕೊಂಡು ಸ್ವಚ್ಛತೆ ಕಾಪಾಡಿಕೊಳ್ಳುವಂತೆ ತಿಳುವಳಿಕೆ ನೀಡಬೇಕು ಎಂದು ಹೇಳಿದರು.

ಮಳೆಗಾಲ ಆರಂಭವಾಗಿರುವುದರಿಂದ ಸಂಬಂಧಿಸಿದ ಅಧಿಕಾರಿಗಳು ಮಳೆಯ ನೀರು ಒಂದೇ ಕಡೆ ನಿಲ್ಲದೆ, ಸರಾಗವಾಗಿ ಹರಿದು ಹೋಗುವಂತೆ ನೋಡಿಕೊಳ್ಳಬೇಕು. ಬಾವಿ, ಕೆರೆ, ಹೊಂಡಗಳಲ್ಲಿ ಲಾರ್ವಾ ಹಾಗರಿ ಮೀನು ಮರಿಗಳನ್ನು ಬಿಡುವುದರಿಂದ ಸೊಳ್ಳೆಗಳು ನಾಶವಾಗಿ ಡೆಂಗಿ ಜ್ವರವನ್ನು ನಿಯಂತ್ರಿಸಬಹುದಾಗಿದ್ದು, ಈ ಕುರಿತು ಸೂಕ್ತ ಜಾಗೃತಿ ಹಾಗೂ ತಿಳುವಳಿಕೆ ಮೂಡಿಸಬೇಕು. ಪ್ರತಿ ಶುಕ್ರವಾರ ಆಶಾ-ಅಂಗನವಾಡಿ ಕಾರ್ಯಕರ್ತೆಯರು ಪ್ರತಿ ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸಿ ಲಾರ್ವಾ ಮೀನು ಮರಿ ವಿತರಣೆ ಹಾಗೂ ಫೆಮಿಫಾಸ್ಟ್ ಸಿಂಪರಣೆಗೆ ಕ್ರಮ ಕೈಗೊಳ್ಳಬೇಕು ಈ ಕಾರ್ಯವನ್ನು ಆರೋಗ್ಯ ಇಲಾಖೆ ಗಂಭೀರವಾಗಿ ಪರಿಗಣಿಸಿ ಅನುಷ್ಠಾನಗೊಳಿಸುವಂತೆ ಅವರು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಎನ್‌ವಿಬಿಡಿಸಿ ಉಪನಿರ್ದೇಶಕರಾದ ಶರೀಫ ಅವರು ಮಾತನಾಡಿ ರಾಜ್ಯದಲ್ಲಿ ಡೆಂಗಿ ಜ್ವರ ಹೆಚ್ಚು ಕಂಡು ಬಂದಿದ್ದು ಡೆಂಗಿ ಜ್ವರ ನಿಯಂತ್ರಿಸಲು ಪ್ರತಿ ಶುಕ್ರವಾರ ಜನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಇದರಿಂದ ಡೆಂಗಿ ಜ್ವರ ನಿಯಂತ್ರಣಕ್ಕೆ ಸಹಕಾರಿಯಾಗಲಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಲಾರ್ವಾಹಾರಿ ಮೀನುಮರಿ ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಡೆಂಗಿ ರೋಗ ನಿಯಂತ್ರಣ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತಾ,ಎನ್.ಎಚ್.ಎಮ್ ಎಮ್.ಡಿ ನವೀನ ಭಟ್, ಆಯುಕ್ತರಾದ ಡಿ. ರಂದೀಪ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕನ್ನಾನ ಅಬ್ದುಲ್ ಹಮೀದ ಮುಶ್ರೀಪ್, ಮಲ್ಲಿಕಾರ್ಜುನ ಲೋಣಿ, ಅಬ್ದುಲ್ ರಜಾಕ ಹೊರ್ತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಬಸವರಾಜ ಹುಬ್ಬಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಶಿವಾನಂದ ಮಾಸ್ತಿಹೊಳಿ, ಡಾ.ಸಂಪತ್ ಗುಣಾರಿ, ಡಾ.ಪಿ.ಎ. ಹಿಟ್ನಳ್ಳಿ, ಡಾ. ಈರಣ್ಣ ಧಾರವಾಡಕರ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಿಬ್ಬಂದಿ ಹಾಗೂ ಇತರರು ಉಪಸ್ಥತರಿದ್ದರು. ನೂರಅಹಮ್ಮದ ಬಾಗವಾನ ಸ್ವಾಗತಿಸಿ ವಂದಿಸಿದರು.

**ಸಚಿವರಿಂದ ಜಿಲ್ಲಾಸ್ಪತ್ರೆಗೆ ಭೇಟಿ-ಪರಿಶೀಲನೆ:**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ಶುಕ್ರವಾರ ಜಿಲ್ಲಾ ಆಸ್ಪತ್ರೆಗೆ ಬೆಟಿ ನೀಡಿ ವಿವಿಧ ಕಟ್ಟಡಗಳನ್ನು ವಾರ್ಡ್‌ಗಳನ್ನು ಭೇಟಿ ಮಾಡಿ ಕೆಲಸ ಕಾರ್ಯಗಳನ್ನು ಪರಿಶೀಲಿಸಿದರು.

ಪುಟ್ಟರಾಜ ಗವಾಯಿ ಟ್ರಾಮಾ ಸೆಂಟರಕ್ಕೆ ಭೇಟಿ ನೀಡಿ ಅಲ್ಲಿಯ ಕೆಲಸ ಕಾರ್ಯಗಳನ್ನು ಪರಿಶೀಲಿಸಿದ ಅವರು, ಟ್ರಾಮಾ ಕೇಂದ್ರ ಕಾರ್ಯಾರಂಭಕ್ಕೆ ಸೂಚನೆ ನೀಡಿದರು. ಸೂಪರ್ ಸ್ಪೆಶಾಲಿಟಿ ಕಾಮಗಾರಿಯನ್ನು ಪರಿಶೀಲಿಸಿ ಆದಷ್ಟು ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಬೇಕು. ನೂತನ 250 ಬೆಡ್ಡಿನ ಆಸ್ಪತ್ರೆಯ ಕಟ್ಟಡ ಕಾಮಗಾರಿ ಪೂರ್ಣಗೊಳಿಸಿ ಹಸ್ತಾಂತರಿಸುವಂತೆ ಸಂಬಂಧಿಸಿದ ಅಭಿಯಂತರರಿಗೆ ಸೂಚಿಸಿದರು.

ನಂತರ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿದ ಸಚಿವರು, ಅಲ್ಲಿರುವ ರೋಗಿಗಳ ಜೊತೆ ಸಮಾಲೋಚಿಸಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಕಲ್ಪಿಸಲಾಗುತ್ತಿರುವ ವೈದ್ಯಕೀಯ ಸೇವೆ ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು.

ಕಣ್ಣಿನ ವಿಭಾಗ ಮಕ್ಕಳ ವಿಭಾಗ ಡಿ ಎನ್ ಸಿ ಇನ್ನಿತರ ವಿಭಾಗಗಳಿಗೆ ಭೇಟಿ ನೀಡಿ ಅಲ್ಲಿಯ ಕಾರ್ಯದ ಬಗ್ಗೆ ಆಸ್ಪತ್ರೆಯ ಸ್ವಚ್ಛತೆ ಸಿಬ್ಬಂದಿಗಳು ರೋಗಿಗಳ ಜೊತೆ ನಡೆದುಕೊಳ್ಳುವ ರೀತಿ ಇನ್ನಿತರ ಸೇವೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಶಿವಾನಂದ್ ಮಾಸ್ತಿಹೊಳಿ ವಿವರಣೆ ನೀಡಿ-ದರು.

ಈ ಸಂದರ್ಭದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಹರ್ಷ ಗುಪ್ತಾ, ಆಯುಕ್ತರಾದ ಡಿ ರಂದೀಪ್, ಅಭಿಯಾನ ನಿರ್ದೇಶಕರಾದ ನವೀನ್ ಭಟ್. ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ರಿಷಿ ಆನಂದ್ ಸೇರಿದಂತೆ ಆರೋಗ್ಯ ಇಲಾಖೆಯ ಅಪರ ನಿರ್ದೇಶಕರುಗಳು ಜಂಟಿ ನಿರ್ದೇಶಕರುಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಬಸವರಾಜ್ ಹುಬ್ಬಳ್ಳಿ ಆಸ್ಪತ್ರೆಯ ಎಲ್ಲ ವೈದ್ಯರುಗಳು ಅಧಿಕಾರಿ-ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಶಾಲೆಯ ಕೊಠಡಿಯ ಕಟ್ಟಡಕ್ಕೆ ಹಳೆ ವಿದ್ಯಾರ್ಥಿಗಳು ಶಾಸಕರಿಗೆ ಮನವಿ



**ಹೂವಿನ ಹಿಪ್ಪರಗಿ :** ಬಸವನ ಬಾಗೇವಾಡಿ ತಾಲೂಕಿನ ದಿಂಡವಾರ ಗ್ರಾಮದ ಸರಕಾರಿ ಕನ್ನಡ ಗಂಡು ಮಕ್ಕಳ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಮತ್ತು. ಸರಕಾರಿ ಹೆಣ್ಣು ಮಕ್ಕಳ ಪ್ರಥಮಿಕ ಶಾಲೆಯ. ಎರಡು ಶಾಲೆಯ ಒಂದೇ ಮೈದಾನದಲ್ಲಿ ಮತ್ತು ಒಂದೇ ಕಂಪೌಂಡದಲ್ಲಿ. ನಡೆಯುತ್ತಿದ್ದು.. ಎರಡು ಶಾಲೆಗಳಿಗೆ ಹೊಸ.ಕೊಠಡಿಗಳ ತುಂಬಾ ಅವಶ್ಯಕತೆ ಇದೆ ಮತ್ತು ಕೊಠಡಿಗಳ ರಿಪೇರಿಯ ಕೂಡ ಮಾಡಬೇಕಾಗಿದೆ. ಗಂಡು ಮಕ್ಕಳ ಶಾಲೆಯ ವಿದ್ಯಾರ್ಥಿಗಳ ಸಂ-ಖ್ಯೆ 340. ಇದ್ದು ಮತ್ತು ಹೆಣ್ಣು ಮಕ್ಕಳು ಶಾಲೆಯ ವಿದ್ಯಾರ್ಥಿಗಳ ಸಂಖ್ಯೆ 215. ಇರುತ್ತದೆ. ಹಾಗಾಗಿ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ. ಮತ್ತು ಕಲಿಕೆಗೆ ತುಂಬಾ ತುಂಬಾ ತೊಂದರೆ ಆಗಿದೆ.. ಮಳೆ ಬಂದರೆ ಶಾಲೆಯ. ಕೊಠಡಿಗಳು ಸೋರುತ್ತಾವೆ. ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿದ್ದರಿಂದ ಕೋಣೆಗಳು ಬೇಕಾಗಿದೆ. ಕೊಠಡಿಗಳ ಇಲ್ಲದ ಕಾರಣ ಶಿಕ್ಷಕರಿಗೆ ತುಂಬಾ ಸಮಸ್ಯೆ ಉಂಟು ಮಾಡಿದೆ.ಕೊಠಡಿಗಳು ಇಲ್ಲದಕಾರಣಶಿಕ್ಷಕರುವಿದ್ಯಾರ್ಥಿಗಳಿಗೆಮೈದಾನದಲ್ಲಿ ಕೂಡಿಸಿ ವಿದ್ಯಾಭ್ಯಾಸ ಮಾಡುವ ಪರಿಸ್ಥಿತಿ ಇದೆ.. ದಿಂಡವಾರ ಗ್ರಾಮದ ಹಳೆ ವಿದ್ಯಾರ್ಥಿಗಳ ಸಂಘ ಮತ್ತು. ಗ್ರಾಮ ಪಂಚಾಯಿತಿಯ ಸದಸ್ಯರು ಮತ್ತು ಅಧ್ಯಕ್ಷರು. ಗ್ರಾಮದ ಹಿರಿಯರು ಮುಖಂಡರು ಶಿಕ್ಷಣ ಪ್ರೇಮಿಗಳು ಮತ್ತು ದಾನಿಗಳು ಕೂಡಿಕೊಂಡು ಶಾಲೆಯ ಒಳ್ಳೆಯ ಅಭಿವೃದ್ಧಿನ್ನು ಮಾಡಲಾಗಿದೆ. ದಿಂಡವಾರ ಗ್ರಾಮದ. ಎರಡು ಶಾಲೆಯ ಕೋಣೆಗಳು ಮತ್ತು ರಿಪೇರಿಯ ಸಲುವಾಗಿ. ಗ್ರಾಮದ ಹಳೆಯ ವಿದ್ಯಾರ್ಥಿಗಳ ಸಂಘದ ವತಿಯಿಂದ. ನಮ್ಮ ಮತಕ್ಷೇತ್ರದ ದೇವರ ಹಿಪ್ಪರಗಿ ವಿಧಾನಸಭಾ ಮತಕ್ಷೇತ್ರದ ಶಾಸಕರಾದ. ಶ್ರೀ ರಾಜುಗೌಡಪಾಟೀಲ್.ಕುದುರಿಸಾಲವಾಡಗಿ ಇವರಿಗೆ ಕೊಠಡಿಯ ನಿರ್ಮಾಣಕ್ಕಾಗಿ ಮತ್ತು ರಿಪೇರಿಗಾಗಿ ತಮ್ಮ ಅನುದಾನದಲ್ಲಿ. ಮಂಜುರ ಮಾಡಬೇಕಾಗಿ ಮನವಿಯನ್ನು ನೀಡಿ ವಿನಂತಿಸಿಕೊಂಡರು. ನಾವು ಕೂಡ ಶಾಲೆಗೆ ಭೇಟಿ ನೀಡಿದಾಗ ಶಾಲೆಯ ಮುಖ್ಯ ಗುರುಗಳು ವಿಷಯ ತಿಳಿಸಿದರು. ಆ ಸಂದರ್ಭದಲ್ಲಿ ತಾಲೂಕ ಕ್ಷೇತ್ರ ಶಿಕ್ಷಣ ಅಧಿಕಾರಿಗಳಿಗೆ ದೂರವಾಣಿ ಮುಖಾಂತರ ನಾವು ಕೂಡ ತಿಳಿಸಿದ್ದೇವೆ. ಮತ್ತು ಖುದ್ದಾಗಿ ಅವರಿಗೆ ಭೇಟಿಯಾಗಿ ಈ ವಿಷಯಗಳು ಚರ್ಚೆಯನ್ನು ಮಾಡಲಾಗಿದೆ ಈ ಸಂದರ್ಭದಲ್ಲಿ. ಹಳೆಯ ವಿದ್ಯಾರ್ಥಿಗಳ ಸಂಘದ ಎಲ್ಲಾ ಸದಸ್ಯರು. ಸಂಘದ ಮುಖ್ಯಸ್ಥರು ಮತ್ತು ಶಿಕ್ಷಣ ಪ್ರೇಮಿಗಳು. ವಿಕಾಸ್ ಜೋಗಿ. ಮುತ್ತು ಹೂಗಾರ್.

ಶಿವಲಿಂಗ ನೇಗಿನಾಳ.ಸುರೇಶ್ ಬೂದಿಹಾಳ. ಗುಂಡು ಕೊಂಡುಗುಳಿ. ಎಲ್ಲಾ ಹಳೆಯ ವಿದ್ಯಾರ್ಥಿಗಳು ಮತಕ್ಷೇತ್ರದ ಶಾಸಕರಿಗೆ ಮನವಿ ನೀಡಿ ಉಪಸ್ಥಿತರಿದ್ದರು.

# ಮಿನಿ ವಿಧಾನಸೌಧ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ ಜಿಲ್ಲಾಧಿಕಾರಿಗಳಿಂದ ಕನಕಗಿರಿ ತಾಲ್ಲೂಕಿನ ವಿವಿಧ ಸ್ಥಳಗಳ ಭೇಟಿ

**ಕೊಪ್ಪಳ** : ಜನ ಸ್ಪಂದನಾ ಕಾರ್ಯಕ್ರಮ ಹಿನ್ನೆಲೆಯಲ್ಲಿ ಕನಕಗಿರಿತಾಲ್ಲೂಕಿನಪ್ರವಾಸದಲ್ಲಿದ್ದ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಬುಧವಾರದಂದು ಕನಕಗಿರಿ ಪಟ್ಟಣ ಹಾಗೂ ಗ್ರಾಮೀಣ ಭಾಗದ ವಿವಿಧ ಸ್ಥಳಗಳಿಗೆ ಭೇಟಿ ಮಾಡಿದರು.

ಮಿನಿ ವಿಧಾನಸೌಧ ನಿರ್ಮಾಣಕ್ಕಾಗಿ ಕನಕಗಿರಿ ಪಟ್ಟಣದಲ್ಲಿ ಕಾಯ್ದಿರಿಸಲಾದ ಜಮೀನಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಮಿನಿ ವಿಧಾನಸೌಧ ನಿರ್ಮಾಣ ಕುರಿತಂತೆ ನೀಲಿನಕ್ಷೆ ಪರಿಶೀಲಿಸಿದರು.

ಬಳಿಕ ಜಿಲ್ಲಾಧಿಕಾರಿಗಳು ಕನಕಗಿರಿ ತಾಲ್ಲೂಕಿನ ಕಲಕೇರಾ ಗ್ರಾಮಕ್ಕೆ ತೆರಳಿ ಅಲ್ಲಿನ ಪ್ರಾಚೀನ ವಸ್ತು ಸಂಗ್ರಹಾಲಯ ಕಟ್ಟಡ ನಿರ್ಮಾಣಕ್ಕಾಗಿ ಕಾಯ್ದಿರಿಸಿದ ಜಮೀನು ಸ್ಥಳ ಪರಿಶೀಲಿಸಿದರು. ಇದೇ ವೇಳೆ ಜಿಲ್ಲಾಧಿಕಾರಿಗಳು ಕಲಕೇರಾಗ್ರಾಮದಉನ್ನತಿಕರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ತೆರಳಿ ವಿದ್ಯಾಭ್ಯಾಸದ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಮಾಲೋಚಿಸಿ, ಶಾಲೆಯಲ್ಲಿ ಮೂಲಭೂತ ಸೌಲಭ್ಯಗಳನ್ನು ಸಮರ್ಪವಾಗಿ ಕಲ್ಪಿಸುವಂತೆ ಶಿಕ್ಷಕರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರಾಹುಲ್‌ರತ್ನಂಪಾಂಡೆಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟ ಗೋಡಿ, ಕೊಪ್ಪಳ ಉಪವಿಭಾಗಾಧಿಕಾರಿಗಳಾದ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಕನಕಗಿರಿ ತಹಶೀಲ್ದಾರರಾದ ವಿಶ್ವನಾಥ ಮುರಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕೊಪ್ಪಳ** : 2024-25ನೇ ಸಾಲಿಗಾಗಿ ಕೊಪ್ಪಳ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕರ / ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಮತ್ತು ಅರ್ಹ ವಿದ್ಯಾರ್ಥಿಗಳು ಗಂಗಾವತಿಯ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಹಾಗೂ ಗಂಗಾವತಿ ತಾಲ್ಲೂಕಿನ ಬಸಾಪಟ್ಟಣದ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಗಳ ಪ್ರವೇಶಕ್ಕಾಗಿ (ಸ್ಟೇಟ್ ಹಾಸ್ಟೆಲ್ ಪೋರ್ಟಲ್) https://shp.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಜುಲೈ 19 ಕೊನೆಯ ದಿನವಾಗಿದ್ದು, ವಿದ್ಯಾರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸಿದ ನಂತರ ಆನ್‌ಲೈನ್ ಅರ್ಜಿಯ ಪ್ರತಿ ಹಾಗೂ ಅಗತ್ಯ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ದೂ.ಸಂ.08539-225070 ಹಾಗೂ ಎಲ್ಲಾ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳು ಮತ್ತು ಹತ್ತಿರದ ವಸತಿ ನಿಲಯಗಳಿಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾನ್ ದಾರ್ಶನಿಕ, ಸಂತಶ್ರೇಷ್ಠ ಗುರುದೇವ ರಾನಡೆ ಅವರ ಜಯಂತಿ

ಇಪ್ಪತ್ತನೆಯ ಶತಮಾನದಲ್ಲಿ ಭಾರತವು ಕಂಡ ಹಲವಾರು ವಿರಳ ದಾರ್ಶನಿಕರಲ್ಲಿ ಡಾ। ಗುರುದೇವ ರಾನಡೆಯವರೂ ಒಬ್ಬರು. ಮಹರ್ಷಿ ಶ್ರೀ ಅರವಿಂದರಂತೆ ಸಂತ ರಾನಡೆಯವರು ವಿಶ್ವ ವಿದ್ಯಾಲಯದ ಅತ್ಯುಚ್ಚ ಪದವಿ ಗಳಿಸಿದ್ದರು.

ಗುರುದೇವ ರಾನಡೆಯವರು ಬಾಗಲಕೋಟೆಯ ಜಮಖಂಡಿಯಲ್ಲಿ 1886 ರ ಜುಲೈ 3 ರಂದು ಜನಿಸಿದರು. ಧಾರ್ಮಿಕ ಸ್ವಭಾವದ ಅವರ ತಾಯಿ ರಾನಡೆಯವರನ್ನು ಸಂಸ್ಕಾರಯುತರನ್ನಾಗಿ ಬೆಳೆಸಿದರು. ಮುಂಬೈ ವಿಶ್ವವಿದ್ಯಾಲಯದ 1902 ರ ಮೆಟ್ರಿಕ್ಯುಲೇಷನ್ ಪರೀಕ್ಷೆಯಲ್ಲಿ ಜಮಖಂಡಿಯ #PB_HIGHSCHOOL ವಿದ್ಯಾರ್ಥಿಯಾಗಿ ಎರಡನೆಯ ಸ್ಥಾನವನ್ನು ಪಡೆದು ಸಂಸ್ಕೃತದಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಪಡೆದುದಕ್ಕಾಗಿ ಜಗನ್ನಾಥ ಶಂಕರ ಸೇಟ್ ಸ್ಕಾಲರ್ ಶಿಪ್‌ಅನ್ನು ಪಡೆದರು. ತಮ್ಮ ಹದಿನೈದನೆಯ ವಯಸ್ಸಿನಲ್ಲಿ ಇಂಚಗೇರಿಯ ಸಂಪ್ರದಾಯದ ಉಮದಿ ಭಾವುಸಾಹೇಬ ಎಂಬ ಗುರುಗಳಿಂದ ನಾಮದೀಕ್ಷೆಯನ್ನು ಪಡೆದು ನಿಷ್ಠೆಯಿಂದ ಸಾಧನೆಯನ್ನು ಮಾಡಿ ಆತ್ಮಸಾಕ್ಷಾತ್ಕರವನ್ನು ಪಡೆದರು.

ಗುರುವು ಬಿತ್ತಿದ ಪರಮಾರ್ಥ ಜ್ಞಾನ ಮತ್ತು ತತ್ವಜ್ಞಾನಗಳ ಬೀಜವು ಮುಂದೆ ಗುರುದೇವ ರಾನಡೆಯೆಂಬ ಮಹಾವೃಕ್ಷವಾಗಿ ಆಧ್ಯಾತ್ಮ ಮತ್ತು ತತ್ವಜ್ಞಾನದ ಫಲವನ್ನು ಈ ನಾಡಿಗೆ ನೀಡಿತು.

ಸಂಸ್ಕೃತದ ಜೋತೆಗೆ ಪಾಶ್ಚಾತ್ಯ ಭಾಷೆಗಳಾದ ಇಂಗ್ಲಿಷ್,ಗ್ರೀಕ್,ಲ್ಯಾಟಿನ್,ಜರ್ಮನ್‌ಮುಂತಾದ ಭಾಷೆಗಳನ್ನು ಬಲ್ಲವರಾಗಿದ್ದರು. ಪಾಶ್ಚಾತ್ಯ ತತ್ವಜ್ಞಾನದ ಗ್ರಂಥಗಳನ್ನು ಮೂಲದಲ್ಲಿಯೇ ಓದುವಷ್ಟು ಪಾಂಡಿತ್ಯ ಗಳಿಸಿದ್ದರು. ಭಾರತದ ರಾಷ್ಟ್ರಪತಿಯಾಗಿದ್ದ ಡಾ। ಸರ್ವಪಲ್ಲಿ ರಾಧಾಕೃಷ್ಣನ್ ಅವರು ನಿಂಬಾಳದಲ್ಲಿರುವ ಗುರುದೇವ ರಾನಡೆಯವರ ಆಶ್ರಮಕ್ಕೆ ಭೇಟಿಕೊಟ್ಟಾಗ, ನಾನು ಬರಿ ತತ್ತ್ವಜ್ಞಾನದ ಪ್ರಾಧ್ಯಾಪಕ, ಆದರೆ ನೀವು (ರಾನಡೆಯವರು) ಪ್ರಾಧ್ಯಾಪಕರು ಅಷ್ಟೇ ಅಲ್ಲ, ಅನುಭಾವಿಗಳು, ದೇವರನ್ನು ಸಾಕ್ಷಾತ್ಕರಿಸಿಕೊಂಡ ಸಂತವರೇಣ್ಯರು' ಎಂಬ ಉದ್ಗಾರ ತೆಗೆದಿದ್ದರಂತೆ. ಗುರುದೇವ ರಾನಡೆಯವರ ಮನೆ ಮಾತು ಮರಾಠಿಯಾಗಿದ್ದರೂ ಅವರು ಜಮಖಂಡಿಯಲ್ಲಿ ಜನಿಸಿದ್ದರಿಂದ ಅವರಿಗೆ



ಕನ್ನಡಚೆನ್ನಾಗಿಬರುತ್ತಿತ್ತು.ಅವರುಅಲಹಾಬಾದ್ ವಿಶ್ವವಿದ್ಯಾಲಯದ ಕುಲಪತಿಗಳಾಗಿದ್ದರಿಂದ ಅವರು ಹಿಂದಿ ಭಾಷೆಯಲ್ಲಿಯೂ ಪರಿಣತಿ ಪಡೆದಿದ್ದರು. ಕನ್ನಡ, ಹಿಂದಿ ಮತ್ತು ಮರಾಠಿ ಸಾಹಿತ್ಯಗಳಲ್ಲಿಯ ಸಂತ ವಾಙ್ಮಯದ ಬಗ್ಗೆ ಮೂರು ಉದ್ರಂಥಗಳನ್ನು ಇಂಗ್ಲಿಷ್ ಭಾಷೆಯಲ್ಲಿ ರಚಿಸಿದರು. 'Pathway to God in Kannada Literature' ಗ್ರಂಥದ ಕನ್ನಡ ಅನುವಾದ, ಕನ್ನಡ ಸಂತರ ಪರಮಾರ್ಥ ಪಥ' ಎಂಬ ಶೀರ್ಷಿಕೆಯಲ್ಲಿ ಕರ್ನಾಟಕ ವಿಶ್ವ ವಿದ್ಯಾಲಯದಿಂದ ಪ್ರಕಾಶನಗೊಂಡಿದೆ. 'A Constructive Survey of Upanishadic Philosophy' ಎಂಬ ಗ್ರಂಥವನ್ನು ಕನ್ನಡದ ಉದ್ದಾಮ ಪಂಡಿತರಾದ ದ. ರಾ. ಬೇಂದ್ರೆ, ರಂಗನಾಥ ರಾ. ದಿವಾಕರ, ಶಂ.ಬಾ. ಜೋಶಿಯವರು ಕನ್ನಡಕ್ಕೆ ಅನುವಾದಿಸಿದ್ದಾರೆ

1914 ರಲ್ಲಿ ತತ್ವಶಾಸ್ತ್ರದಲ್ಲಿ ಎಂ.ಎ.ಪದವಿಯನ್ನು ಕುಲಪತಿಗಳ ಚಿನ್ನದ ಪದಕದೊಂದಿಗೆ ಪಡೆದರು. ಮುಂದೆ ಪಾಶ್ಚಾತ್ಯ ಮತ್ತು ಪೌರ್ವಾತ್ಯ ತತ್ವಶಾಸ್ತ್ರಗಳ ಬಗೆಗೆ ವಿಶೇಷ ಅಧ್ಯಯನವನ್ನು ನಡೆಸಿ ಇಸವಿ 1914 ಮತ್ತು 1924 ರ ಅವಧಿಯಲ್ಲಿ ಪುಣೆಯ ಫರ್ಗುಸನ್ ಕಾಲೇಜು ಮತ್ತು ಸಾಂಗ್ಲಿಯ ವಿಲ್ಲಿಂಗ್ಡನ್ ಕಾಲೇಜುಗಳಲ್ಲಿ ತತ್ವಶಾಸ್ತ್ರದ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದರು. ಗುರುದೇವ ರಾನಡೆಯವರ ಅನಾರೋಗ್ಯ, ಸಾಂಸಾರಿಕ ಕಷ್ಟ ಕೋಟಲೆಗಳು ಅವರ ಆಧ್ಯಾತ್ಮ ಸಾಧನೆಯ ದಾರಿಯಲ್ಲಿ ಅವರ ಮನೋಸ್ಥೈರ್ಯವನ್ನು ಅಡಿಗಡಿಗೆ ಪರೀಕ್ಷಿಸುತ್ತಿದ್ದರೂ ಸದ್ಗುರುವಿನ ಪರಮ ಕೃಪೆಯಿಂದ ಅವರು ಇವೆಲ್ಲವನ್ನು ಲೀಲಾಜಾಲವಾಗಿ ಎದುರಿಸಿದರು.

ಅಲಹಾಬಾದ್ ಕಾಲೇಜಿನ ತತ್ವಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿ ನಿವೃತ್ತರಾದ ಗುರುದೇವ ರಾನಡೆಯವರು ತಮ್ಮ ನಿವೃತ್ತಿ ಜೀವನವನ್ನು ಆಧ್ಯಾತ್ಮ ಸಾಧನೆ, ಆಧ್ಯಾತ್ಮಜ್ಞಾನ ಪ್ರಸಾರಕ್ಕಾಗಿ ಮೀಸಲಿಟ್ಟು 1924 ರಲ್ಲಿ ಸೋಲಾಪುರ ಮತ್ತು ಬಿಜಾಪುರಗಳ ನಡುವೆ ಇರುವ ಒಂದು ಸಣ್ಣ ಗ್ರಾಮ ನಿಂಬಾಳಕ್ಕೆ ಬಂದು ನೆಲೆಸಿದರು.

ಉಪನಿಷತ್ತು, ಭಗವದ್ಗೀತೆ, ಆಧ್ಯಾತ್ಮಗಳ ಮೇಲೆ ಅವರು ಭಾರತದ ಅನೇಕ ಕಡೆಗಳಲ್ಲಿ ಪ್ರವಚನಗಳನ್ನು ನೀಡಿದ್ದಾರೆ. 1937 ರಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿ ನಡೆದ ಭಾರತೀಯ ತತ್ವಜ್ಞಾನ ಸಮ್ಮೇಳನದ ಅಧ್ಯಕ್ಷ ಸ್ಥಾನವನ್ನು ಅವರು ಅಲಂಕರಿಸಿದರು.

'Mysticism in Maharastra, 'A constructive survay of Upanishadic Philosophy' ತತ್ವಜ್ಞಾನದ ಮೇಲೆ ಉಪನಿಷತ್ತುಗಳ ಪ್ರಭಾವ ಕುರಿತಂತೆ ರಾನಡೆಯವರು ಬರೆದ ಗ್ರಂಥ ಆಧ್ಯಾತ್ಮ ಮತ್ತು ತತ್ವಜ್ಞಾನದ ಬಗೆಗೆ ಅಧ್ಯಯನ ನಡೆಸುವವರಿಗೆ ಮಾರ್ಗದರ್ಶಿಯಾಗಿದೆ. 'ಕಚಿಣುತಿಚಿಥಿ ಣಿ ಉಜ' (ದೇವರೆಡೆಗೆ ದಾರಿ) ಹಿಂದಿ ಮತ್ತು ಮರಾಠಿ ಭಾಷೆಗಳಲ್ಲೂ, 'ರಾಮದಾಸ ವಚನಾಮೃತ' ಸಮರ್ಥ ರಾಮದಾಸರ ಮನಾಚೆ ಶ್ಲೋಕಗಳನ್ನು ಆಧರಿಸಿ ರಚಿಸಿದ ಕೃತಿ ಹಾಗೂ ಅವರ ವಿವಿಧೆಡೆ ನೀಡಿದ ಆಧ್ಯಾತ್ಮ ಪ್ರವಚನಗಳು ಪುಸ್ತಕ ರೂಪದಲ್ಲಿ ಪ್ರಕಟವಾಗಿವೆ. ಇಂತಹ ಸಂತ, ತತ್ವಜ್ಞಾನಿ ಶ್ರೀ ಗುರುದೇವ ರಾನಡೆ ಜೂನ 6, 1957 ರಂದು ಪರತತ್ವದಲ್ಲಿ ಲೀನವಾದರು ನಿಂಬಾಳದಲ್ಲಿ ಅವರು ವಾಸಿಸುತ್ತಿದ್ದ ಮನೆ ಈಗ ಪರಮಾರ್ಥ ಮಂದಿರವಾಗಿ, ಆಧ್ಯಾತ್ಮಿಕ ಕೇಂದ್ರವಾಗಿ, ಧ್ಯಾನ ಕೇಂದ್ರವಾಗಿನ ರೂಪುಗೊಂಡಿದೆ. ಸತ್ಸಂಗಗಳು, ಧ್ಯಾನಯೋಗ, ತತ್ವಜ್ಞಾನ ಕುರಿತಾದ ಬೋಧನೆಗಳು ಅಲ್ಲಿ ನಡೆಯುತ್ತಿದ್ದು ಪರಮಾರ್ಥ ಸಾಧಕರಿಗೆ ಅದು ಒಂದು ಶ್ರದ್ಧಾಕೇಂದ್ರವಾಗಿದೆ.

ಜೀವನದ ಸುಖಃ –ದುಃಖಗಳ ಮಧ್ಯೆ ಅನುಭವಿಯಾಗಿ ತತ್ವಜ್ಞಾನದ ಸಾಗರದಲ್ಲಿ ಸ್ವಚ್ಛಂದವಾಗಿ ಈಜಿದ ಗುರುದೇವ ರಾನಡೆ ಅವರಿಗೆ ಅಗಣಿತ ನಮನಗಳು.

# ಅಕ್ಕ ಶೈನಿಂಗ್ ಸ್ಟಾರ್ಸ ಪ್ರಾರಂಭೋತ್ಸವ

**ಬಾಗಲಕೋಟೆ :** ಅಕ್ಕನ ಬಳಗದ ಸಾಮಾಜಿಕ,ಧಾರ್ಮಿಕ,ಸಾಂಸ್ಕೃತಿಕ ಅಭ್ಯುದಯಕ್ಕೆ ತನ್ನದೆಯಾದ ಕೊಡುಗೆ ನೀಡಿದ್ದು ಇಂದು ತನ್ನ ಪ್ರಥಮ ಶಿಶುವಿಹಾರ ಈಗ ಆಧುನಿಕತೆಗೆ ತಕ್ಕಂತೆ ಅಕ್ಕ ಶೈನಿಂಗ್ ಸ್ಟಾರ್ಸ ಆಗಿ ಪ್ರಾರಂಭಿಸಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಖ್ಯಾತ ವೈದ್ಯರಾದ ಡಾ,ಅನಸೂಯಾ ಕೆರೂಡಿ ಹೇಳಿದರು.

ಅವರು ನಗರದ ಬಿ.ವಿ.ವಿ.ಸಂಘದ ಅಕ್ಕಬಳಗದಲ್ಲಿ ಅಕ್ಕ ಶೈನಿಂಗ್ ಸ್ಟಾರ್ಸ್ ಪ್ರಾರಂಭೋತ್ಸವದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಅಖಿಲ ಭಾರತ ವೀರಶೈವ ಮಹಾಸಭೆಯ ಸದಿಚ್ಛೆಯಂತೆ ಬಿ.ವಿ.ವಿ.ಸಂಘ ಮಹಿಳಾ ಘಟಕವಾದ ಬಿ.ವಿ.ವಿ.ಎಸ್ ಅಕ್ಕನ ಬಳಗವು 86 ವರ್ಷಗಳಿಂದ ಮಹಿಳೆಯರ ಸಾಮಾಜಿಕ,ಧಾರ್ಮಿಕ ಹಾಗೂ ಸಾಂಸ್ಕೃತಿಕ ಅಭ್ಯುಧಯಕ್ಕೆ ತನ್ನದೆಯಾದ ಕೊಡುಗೆ ನೀಡಿದೆ, ನಗರದಲ್ಲಿ ಪ್ರಥಮವಾಗಿ ಪ್ರಾರಂಭವಾದ ಅಕ್ಕನ ಬಳಗದ ಶಿಶು ವಿಹಾರ ಈಗ ಆಧುನಿಕತೆಯ ತಕ್ಕಂತೆ ಮಾರ್ಪಾಡಿಸಿ ಇಂದಿನ ಮಕ್ಕಳಿಗೆ ಬೇಕಾದ ಅಗತ್ಯವಾದ



ಸೌಲಭ್ಯಗಳನ್ನು ಒದಗಿಸಿ,ನವೀನ ರೀತಿಯಲ್ಲಿ ಶಿಶು ವಿಹಾರ ಈಗ ಅಕ್ಕ ಸೈನಿಂಗ್ ಸ್ಟಾರ್ಸ್ ಆಗಿ ಪ್ರಾರಂಭಮಾಡಿರುವುದು ನಿಜಕ್ಕೂ ಹೆಮ್ಮೆಯ ಎಂದರು.

ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷರಾದ ಡಾ.ವೀರಣ್ಣ ಚರಂತಿಮಠ ಅವರು ಅಕ್ಕ ಸೈನಿಂಗ್ ಸ್ಟಾರ್ಸ ಪ್ರಾರಂಭೋತ್ಸವದ ಕಾರ್ಯಕ್ರಮವನ್ನು ಉಧ್ಘಾಟಿಸಿ ಶುಭ ಹಾರೈಸಿದರು.

ಅಕ್ಷರ ಅಭ್ಯಾಸ: ಅಕ್ಕನ ರುದ್ರಬಳಗದ ಅಧ್ಯಕ್ಷೆಯಾದ ಶ್ರೀಮತಿ ರಾಜೇಶ್ವರಿ ವೀರಣ್ಣ ಚರಂತಿಮಠ ಅವರು ಶ್ರೀಗಣೇಶ ಹಾಗೂ ವಿದ್ಯಾದೇವತೆ ಸರಸ್ವತಿಯ ಪೂಜೆ ಮಾಡುವುದರೊಂದಿಗೆ ಮಕ್ಕಳಿಗೆ ಶಾಸ್ತ್ರೋಕ್ತವಾಗಿ ಅಕ್ಷರ ಅಭ್ಯಾಸ ಮಾಡಿಸಿದರು. ಅಕ್ಕಿ ತುಂಬಿದ ತಟ್ಟೆಯಲ್ಲಿ ಅರಿಷಿನ ಕೊಂಬಿನಿಂದ ಓಂ ಎಂಬ ಬೀಜಾಕ್ಷರಿ ಮಂತ್ರವನ್ನು ಪಾಲಕರು ಮಕ್ಕಳಿಂದ ಬರೆಯುವುದರ ಮೂಲಕ ಅಕ್ಷರ ಅಭ್ಯಾಸ ಪ್ರಾರಂಭಿಸಲಾಯಿತು.

ಕಾರ್ಯಕ್ರಮದಲ್ಲಿ ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿಗಳಾದ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಬಾವಿ, ಶಾಲಾ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ, ಅಕ್ಕನ ಬಳಗದ ಅಧ್ಯಕ್ಷೆ ನಿರ್ಮಲಾ ಹಲಕುರ್ಕಿ, ಸಂಘದ ಮುಖ್ಯ ಸಲಹೆಗಾರಾದ ಡಾ.ಮೀನಾ ಚಂದಾವರಕರ, ಪಾರ್ವತಿ ಆಲೂರ, ಎಸ್. ಎಚ್.ಶೆಟ್ಟರ, ಸುಷ್ಮಾ ಒಡೆಯರ, ಕಮಲಾ ರುದ್ರಾಕ್ಷಿ, ಹಾಗೂ ಅಕ್ಕನ ಬಳಗದ ಸದಸ್ಯರು ಇದ್ದರು.



**ಬಾಗಲಕೋಟೆ : ಹುನಗುಂದ ಮತ್ತು ಇಳಕಲ್ಲ ತಾಲೂಕಿಗೆ ಸಂಬಂಧಿಸಿದ ನವಲಿ ಜಾಕ್‌ವೆಲ್ ಕಾಮಗಾರಿ ಸ್ಥಳಕ್ಕೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಭೇಟಿ ನೀಡಿ ವೀಕ್ಷಣೆ ಮಾಡಿದರು. ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಯೋಜನೆಯ ಕಾರ್ಯನಿರ್ವಾಹಕ ಅಭಿಯಂತರ ಪುರೋಹಿತ ಇದ್ದರು.**

## ಹಳ್ಳೂರ, ಕಪ್ಪಲಗುದ್ಧಿ, ಶಿವಾಪೂರಲ್ಲಿ 3ನೇ ದಿನದ ವಾರದ ಕಾರ್ಯಕ್ರಮ



**ಹಳ್ಳೂರ:** ಗ್ರಾಮದಲ್ಲಿ ನೆಲೆಯಾಗಿ ನೆಲೆಸಿರುವ ಹಳ್ಳೂರ, ಕಪ್ಪಲಗುದ್ಧಿ,ಶಿವಾಪೂರಮೂರೂರುಗ್ರಾಮದಆರಾಧ್ಯ ದೇವರಾದ ಶ್ರೀ ಮಹಾಲಕ್ಷ್ಮೀ ಹಾಗೂ ದ್ಯಾಮವ್ವದೇವಿ ವಾರ ಹಿಡಿಯುವ 3 ನೇ ವಾರದ ಕಾರ್ಯಕ್ರಮದ ನಿಮಿತ್ಯ ಶ್ರೀ ಮಹಾಲಕ್ಷ್ಮೀ ದೇವಸ್ಥಾನದಲ್ಲಿ ಡೊಳ್ಳಿನ ಪದಗಳು ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಮುರೂರು ಗ್ರಾಮಸ್ಥರು ಎಲ್ಲ ದೇವರಿಗೆ ಅನ್ನ ಅಂಬಲಿ ನೈವೇದ್ಯ ಅರ್ಪಿಸಿದರು.ಮುಂಜಾನೆ ಮುದ್ದು ಮಕ್ಕಳು ಎಲ್ಲ ದೇವರಿಗೆ ನೀರುಣಿಸಿದರು. ಮಾಲಿಕರು ಅಂಗಡಿಗಳನ್ನು ಸ್ವ ಇಚ್ಚೆಯಿಂದ ಬಂದ ಮಾಡಿದ್ದರು. ಶ್ರೀ ಮಹಾಲಕ್ಷ್ಮೀ ದೇವಸ್ಥಾನದಲ್ಲಿ ಅನ್ನ , ಅಂಬಲಿ ಪ್ರಸಾದ ವ್ಯವಸ್ಥೆ ನಡೆಯಿತು.

## ನವೋದಯ ಶಾಲೆಗೆ ಆಯ್ಕೆ




**ಮಹಾಲಿಂಗಪುರ :** ಪಟ್ಟಣದ ಬಸವಾನಂದ ಸಾಲೆಯ ವಿದ್ಯಾರ್ಥಿನಿ ಸಾನಿಕಾ ರಾಜಶೇಖರ ಮುರಗೋಡ 2024–25ನೇ ಸಾಲಿಗೆ 6ನೇ ತರಗತಿಗೆ ಜವಾಹರ ನವೋದಯ ವಿದ್ಯಾಲಯ ಬಾಗಲಕೋಟೆಗೆ ಆಯ್ಕೆಯಾಗಿದ್ದಾಳೆ. 1 ರಿಂದ 5ನೇ ತರಗತಿವರೆಗೆ ಬಸವಾನಂದ ಶಾಲೆಯಲ್ಲಿ ಕಲಿತ ವಿದ್ಯಾರ್ಥಿನಿಗೆ ಶಾಲೆಯ ಮುಖ್ಯಗುರು ಎಸ್. ಕೆ.ಗಿಂಡೆ, ಶಿಕ್ಷಕರ ಬಳಗ, ಆಡಳಿತ ಮಂಡಳಿಯ ಸದಸ್ಯರು ಅಭಿನಂದಿಸಿದ್ದಾರೆ.

## ರಾಜು ಹೂಗಾರ ನಿಧನ



**ರಬಕವಿ :** ಇಲ್ಲಿನ ಧನಲಕ್ಷ್ಮಿ ಪತ್ತಿನ ಸಹಕಾರಿ ಸಂಘದ ಬ್ಯಾಂಕಿನಲ್ಲಿ ಪಿಗ್ಮಿ ಕಲೆಕ್ಟರ್ ಆಗಿದ್ದ ಹೊಸೂರಿನ ಸಾಲಿಮನಿ ತೋಟದ ನಿವಾಸಿ ರಾಜಕುಮಾರ್ ಪರಪ್ಪ ಹೂಗಾರ ತಮ್ಮ 52 ನೆಯ ವಯಸ್ಸಿನಲ್ಲಿ ಪ್ರಕೃತಿ ಅಸ್ವಸ್ಥತೆಯಿಂದ ಜೂನ್ 28 ರಂದು ನಿಧನರಾದರು.

ಅವರು ತಮ್ಮ ಹಿಂದೆ ವೃದ್ಧ ತಾಯಿ, ಪತ್ನಿ, ನಾಲ್ವರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

# ಪ್ರಧಾನ ಮಂತ್ರಿ ಆವಾಸ್ ಯೋಜನೆ: ಆದ್ಯತೆ ಮೇರೆಗೆ ಅಪೂರ್ಣ ಮನೆಗಳ ಕಾಮಗಾರಿ ಪೂರ್ಣಗೊಳಿಸಲು ಸಿಎಂ ಸೂಚನೆ

**ಬೆಂಗಳೂರು :** ಪ್ರಧಾನ ಮಂತ್ರಿ ಆವಾಸ್ ಯೋಜನೆ ಅಡಿ ಈಗಾಗಲೇ ಪ್ರಾರಂಭವಾಗಿರುವ ಮನೆಗಳ ಕಾಮಗಾರಿಯನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದರು.

ಅವರು ಕೃಷ್ಣಾದಲ್ಲಿ ಬುಧವಾರ ವಸತಿ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಕೊಳಚೆ ನಿರ್ಮೂಲನೆ ಮಂಡಳಿ ಅಡಿಯಲ್ಲಿ 82 ಸಾವಿರ ಮನೆಗಳು, ರಾಜೀವ್ ಗಾಂಧಿ ವಸತಿ ನಿಗಮ ಅಡಿಯಲ್ಲಿ 47800 ಮನೆಗಳು ಒಟ್ಟು 1.30 ಲಕ್ಷ ಮನೆಗಳು ನಿರ್ಮಾಣದ ವಿವಿಧ ಹಂತಗಳಲ್ಲಿದ್ದು, ಅವುಗಳ ನಿರ್ಮಾಣ ಕಾರ್ಯವನ್ನು ಹಂತ ಹಂತವಾಗಿ ಪೂರ್ಣಗೊಳಿಸಲು ಆದ್ಯತೆ ನೀಡುವಂತೆ ಮುಖ್ಯಮಂತ್ರಿಗಳು ತಿಳಿಸಿದರು.

ಪ್ರತಿ ಮನೆಯ ನಿರ್ಮಾಣದ ಘಟಕ ವೆಚ್ಚ 6 ರಿಂದ 7.5 ಲಕ್ಷಗಳಾಗಿದ್ದು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸ'ಹಾಂಯ'ಧ'ನ'ವ'ನ'್ನ ಹೊರತುಪಡಿಸಿ, ಬಾಕಿ ಸುಮಾರು 4 ರಿಂದ 5 ಲಕ್ಷ ರೂಪಾಯಿಗಳ ವಂತಿಕೆ ಮೊತ್ತವನ್ನು ಫಲಾನುಭವಿಗಳೇ ಭರಿಸಬೇಕಾಗಿತ್ತು. ಈ ಮೊತ್ತವನ್ನು ಆರ್ಥಿಕವಾಗಿ ಆಶಕ್ತರಾಗಿರುವ ಕೊಳಗೇರಿ ನಿವಾಸಿಗಳು ಪಾವತಿಸಲು ಕಷ್ಟಕರವಾಗಿ ಮನೆಗಳ ಕಾಮಗಾರಿಗಳು ಅರ್ಧಕ್ಕೆ ನಿಂತಿದ್ದವು. ಆದುದರಿಂದ, ಫಲಾನುಭವಿಗಳ ಮೇಲಿನ ವಂತಿಕೆ ಹೊರೆಯನ್ನು ಕಡಿಮೆ ಮಾಡಿ, ಒಂದು ಲಕ್ಷಕ್ಕೆ ನಿಗಧಿಗೊಳಿಸಿ, ಪ್ರತಿ ಫಲಾನುಭವಿಗೆ ಬಾಕಿ ರೂ.4.00 ಲಕ್ಷಗಳಂತೆ ಸರ್ಕಾರದಿಂದಲೇ ಭರಿಸಲು ಅನುಮೋದನೆ ನೀಡಲಾಗಿದ್ದು, ಪ್ರಥಮ ಹಂತದಲ್ಲಿ ರೂ. 500ಕೋಟಿ ಮಂಜೂರು ಮಾಡಲಾಗಿದೆ. ಹೆಚ್ಚುವರಿ ಅನುದಾನ ಬಗ್ಗೆ ಹಣಕಾಸು ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಫಲಾನುಭವಿಗಳ ಪಾಲಿನ ಒಂದು ಲಕ್ಷ ರೂ. ವಂತಿಕೆ ಮೊತ್ತವನ್ನು ಸಂಗ್ರಹಿಸುವ ಮೂಲಕ ನಿರ್ಮಾಣ ಕಾರ್ಯವನ್ನು ಚುರುಕುಗೊಳಿಸಬೇಕು ಎಂದು ಸೂಚಿಸಿದರು.

ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ 592 ಕೊಳೆಗೇರಿಗಳ ಅಭಿವೃದ್ಧಿಗೆ ಕೂಡಲೇ ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು.

ಕರ್ನಾಟಕ ಗೃಹ ಮಂಡಳಿಯಲ್ಲಿ ಭೂಸ್ವಾಧೀನ ಮಾಡಿಕೊಂಡ ಜಮೀನಿನಲ್ಲಿ ತ್ವರಿತವಾಗಿ ಕಾಮಗಾರಿ ಕೈಗೊಳ್ಳಬಹುದು. ಆದರೆ 50:50 ಅನುಪಾತದ ಹಂಚಿಕೆ ಆಧಾರದಲ್ಲಿ ಜಮೀನು ಪಡೆದುಕೊಂಡರೆ, ರೈತರಿಗೆ ಮರುಹಂಚಿಕೆ ಮಾಡುವ ಭೂಮಿಯ ಪರಿವರ್ತನೆಯಲ್ಲಿ ವಿಳಂಬವಾಗುತ್ತಿದ್ದು, ಈ ಬಗ್ಗೆ ನೋಂದಣಿ ಮತ್ತು ಮುದ್ರಾಂಕ, ಕಂದಾಯ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಂಯವರೊಂದಿಗೆ ಚರ್ಚಿಸಿ, ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ವಸತಿ ಸಚಿವ ಜಮೀರ್ ಅಹ್ಮದ್ ಖಾನ್, ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಶಿವಲಿಂಗೇಗೌಡ, ಕರ್ನಾಟಕ ಕೊಳೆಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ್ ಅಬ್ಬಯ್ಯ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್. ಕೆ. ಅತೀಕ್, ವಸತಿ ಇಲಾಖೆ ಕಾರ್ಯದರ್ಶಿ ನವೀನ್ ರಾಜ್ ಸಿಂಗ್,

ಆರ್ಥಿಕ ಇಲಾಖೆ ಕಾರ್ಯದರ್ಶಿ ಎಂ.ಟಿ. ರೇಜು, ಉಪ ಕಾರ್ಯದರ್ಶಿ ಇಕ್ರಂ ಶರೀಫ್ ಮತ್ತು ಇತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.



**ಶಶಿಧರ ಕುರೇರ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಇಂದು ಹುನಗುಂದ ಹಾಗೂ ಇಳಕಲ್ ತಾಲ್ಲೂಕಿನ ಎಲ್ಲಾ ಗ್ರಾಮಗಳಿಗೆ 55 ಎಲ್. ಪಿ. ಸಿ. ಡಿ ಶುದ್ಧಿಕರಿಸಿದ ಕುಡಿಯುವ ನೀರಿನ ಯೋಜನೆಯ (DBOT) ಜಾಕ್ ವೆಲ್, ನೀರು ಶುದ್ಧಿಕರಣ ಘಟಕ ಹಾಗೂ ಪೈಪ್ ಲೈನ್ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿ ಅಧಿಕಾರಿಗಳು ಮತ್ತು ಗುತ್ತಿಗೆಧಾರರೊಂದಿಗೆ ಚರ್ಚಿಸಿ ನಿರ್ದೇಶನ ನೀಡಿದರು. ಗ್ರಾಮೀಣ ಕುಡಿಯುವ ನೀರು ಪೂರೈಕೆ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಇಂಜನೀಯರ್ ಆರ್. ಎನ್. ಪುರೋಹಿತ, ಪಿಎಂಸಿ ಇಂಜನೀಯರ ಹಾಗೂ ಗುತ್ತಿಗೆದಾರರು ಉಪಸ್ಥಿತರಿದ್ದರು.**

# ಚಿತ್ರಕಲಾ ಸ್ಪರ್ಧೆಯಲ್ಲಿ ಕು, ಅನನ್ಯ ರಾಘವೇಂದ್ರ ಪಾಲನಕರ ವಿಶೇಷ ಪ್ರಶಸ್ತಿಗೆ ಭಾಜನ

**ಗದಗ :** ಪ್ರಸಕ್ತ ಸಾಲಿನ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ, ಶ್ರೀ ಸಿ ಡಿ ಓ ಜೈನ್ ಆಂಗ್ಲ ಮಾಧ್ಯಮ ಶಾಲೆ, ನಗರಸಭೆ ಗದಗ, ಹಾಗೂ ಇತರೆ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಭೂ ಮರುಸ್ಥಾಪನೆ, ಮರುಭೂಮಿಕರಣ ತಡೆಯುವಿಕೆ ಹಾಗೂ ಬರ ತಡೆಯುವಿಕೆ ವಿಷಯವಾಗಿ ವಿಶೇಷ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.




ಪರಿಸದರ ಕುರಿತು ವಿಶೇಷ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ ಶ್ರೀ ಸಿ ಡಿ ಓ ಜೈನ್ ಆಂಗ್ಲ ಮಾಧ್ಯಮ ಶಾಲೆಯ 7 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿನಿ ಕುಮಾರಿ ಅನನ್ಯ ರಾಘವೇಂದ್ರ ಪಾಲನಕರ ಇವಳು ದ್ವಿತೀಯ ಸ್ಥಾನ ಪಡೆದುಕೊಂಡು ವಿಶೇಷ ಪ್ರಶಸ್ತಿ ಪತ್ರ ಹಾಗೂ ಬಹುಮಾನವನ್ನು ಪಡೆದುಕೊಂಡಿರುತ್ತಾಳೆ. ಈ ಒಂದು ಅಭೂತಪೂರ್ವ ಸಾಧನೆಗೆ ಕುಮಾರಿ ಅನನ್ಯ ರಾಘವೇಂದ್ರ ಪಾಲನಕರ ಇವಳ ಮುಂದಿನ ಉಜ್ವಲ ಭವಿಷ್ಯವು ಯಶಸ್ವಿಯಾಗಲಿ ಎಂದು ಶಾಲೆಯ ಶಿಕ್ಷಕವೃಂದದವರು ಹಾಗೂ ಶಾಲೆಯ ಮುಖ್ಯೋಪಾಧ್ಯಾಯರು ಶುಭಹಾರೈಸಿರುತ್ತಾರೆ.

# ಸೈಕಲ್ ಮೂಲಕ ಹಜ್ಜ್ ತಲುಪಿ ವಾಪಸ ಮರಳಿದ ಹಸನ್‌ರಜಾ ತೇಲಿ ರವರಿಗೆ ವಕ್ಫ್ ಮಂಡಳಿಯಿಂದ ಸನ್ಮಾನ



**ಬಾಗಲಕೋಟ :** ಕಲಾದಗಿಯಿಂದ ಸೈಕಲ್ ಮೂಲಕ ಹಜ್ ತಲುಪಿ ವಾಪಸ ಮರಳಿದ ಹಸನ್‌ರಜಾ ತೇಲಿ ರವರನ್ನು ಜಿಲ್ಲಾ ವಕ್ಫ್ ಕಛೇರಿಯಲ್ಲಿ ಆತ್ಮೀಯ ಸನ್ಮಾನ ಮಾಡಲಾಯಿತು.

26 ವರ್ಷದ ಹಸನ್‌ರಜಾ ಭಾರತ, ನೇಪಾಳ, ಚೈನಾ, ಕಜಕಿಸ್ಥಾನ ಉಜ್ಬೇಕಿಸ್ಥಾನ, ಅಫಘಾನಿಸ್ಥಾನ, ಇರಾಕ, ದುಬೈ, ಮೂಲಕ 10 ತಿಂಗಳು ಸೈಕಲ ಮೂಲಕ ಪ್ರಮಾಣ ಮಾಡಿ 24000 ಕಿ.ಮಿ ದೂರ ಶ್ರಮಿಸಿ ಸೌದಿ ಅರೆಬಿಯಾವನ್ನು ತಲುಪಿ 2024ರ ಹಜ್ಜ್ ಯಾತ್ರೆಯನ್ನು ಪೂರ್ಣಗೊಳಿಸಿದ್ದಾರೆ.

ಶುಕ್ರವಾರರಂದು ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ಈ ಯಾತ್ರಯಿಂದ ನನಗೆ ಸಾಕಷ್ಟು ಅನುಭವ ಸಿಕ್ಕಿದೆ ಇದೊಂದು ಕಠಿಣ ಯಾತ್ರೆಯಾಗಿದ್ದರು ಅಲ್ಲಾಹನ ಅನುಗ್ರಹದಿಂದ ಸುಲಭವಾಗಿ ಪೂರ್ಣಗೊಳಿಸಿದ್ದೇನೆ. ದೇಶದ ಸುಭಿಕ್ಷೆ, ಶಾಂತಿ, ಸೌಹಾರ್ಧತೆಗಾಗಿ ಪ್ರಾರ್ಥನೆ ಮಾಡಿದ್ದೇನೆ ಅಲ್ಲಾಹ ಸಮೃದ್ಧಿ ನೀಡುತ್ತಾನೆ ಎಂಬ ನಂಬಿಕೆ ಇದೆ ಎಂದರು.

ಜಿಲ್ಲಾ ವಕ್ಫ್ ಅಧ್ಯಕ್ಷ ಮೆಹಬೂಬ ಸರಕಾವಸ ರವರು ಹಸನ್‌ರಜಾ ಹಾಗೂ ಅಬ್ದುಲ್‌ರಜಾಕ ಕಲಾಲರನ್ನು ವಕ್ಫ್ ಮಂಡಳಿ ಪರವಾಗಿ ಶಾಲು ಹೊದಿಸಿ ಹೂ ಮಾಲೆ ಹಾಕಿ ಸನ್ಮಾನಿಸಿದರು. ಉಪಾಧ್ಯಕ್ಷ ನೂರಅಹ್ಮದ ತೋಟದ, ಬಂದಾನವಾಜ ಧಾರವಾಡಕರ, ಎ.ಎ. ದಂಡಿಯಾ, ಜಮಾದಾರ ಸರ್, ಆರೀಫ್ ಕಿರಸೂರ, ಕೆ.ಎಂ.ಯು ಅಧ್ಯಕ್ಷ ಜಬ್ಬಾರ ಕಲಬುರ್ಗಿ, ಅಕ್ಬರ ಮುಲ್ಲಾ, ಆರೀಫ ಡಾಲಾಯತ, ಎಮ್.ಆರ್. ಖಾನ್, ರಫೀಕ ನದಾಫ ಸೇರಿ ಅನೇಕರು ಉಪಸ್ಥಿತರಿದ್ದರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State